ವಿಜಯಪುರ | ಸಂಪುಟ 01 | ಸಂಚಿಕೆ 255 | ಪುಟ 4 | ₹ 3.00

https://udayarashminews.com

udayarashmi 7026028778


# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಭಾನುವಾರ, ಡಿಸೆಂಬರ್ 03, 2023



“ವಿಜಯಪುರ ಎಂಪಿ ಕ್ಷೇತ್ರದಲ್ಲಿ ಕಳೆದ 3 ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷವು ಬಂಜಾರ ಸಮುದಾಯಕ್ಕೆ ಅವಕಾಶ ಕೊಟ್ಟಿದ್ದರೂ ಗೆಲುವು ಸಾಧ್ಯವಾಗಲಿಲ್ಲ. ಕಾರಣ ಪ.ಜಾತಿಯ ಪ್ರಭಲ ಛಲವಾದಿ ಸಮುದಾಯಕ್ಕೆ ಟಿಕೆಟ್ ಕೊಟ್ಟರೆ ಕಾಂಗ್ರೆಸ್ ಗೆಲುವು ಖಚಿತ.

– ರಾಜಶೇಖರ ಯಡಹಳ್ಳಿ

ಕೆಪಿಸಿಸಿ ಕಾರ್ಮಿಕ ಘಟಕದ ರಾಜ್ಯ ಕಾರ್ಯದರ್ಶಿ, ವಿಜಯಪುರ

ಬಿಜೆಪಿ–ಕಾಂಗ್ರೆಸ್ ಮಧ್ಯೆ ನೇರ ಪೈಪೋಟಿ | ಸಾರ್ವತ್ರಿಕ ಚುನಾವಣೆಯ ಸೆಮಿಫೈನಲ್ | ಬಿಜೆಪಿ, ಕಾಂಗ್ರೆಸ್ ಗೆ ಅಗ್ನಿ ಪರೀಕ್ಷೆ

# 4 ರಾಜ್ಯಗಳ ಚುನಾವಣೆ ಫಲಿತಾಂಶ ಇಂದು

ಬೆಂಗಳೂರು: ಇನ್ನು ಕೆಲವೇ ತಿಂಗಳಲ್ಲಿ ನಡೆಯಲಿರುವ ಲೋಕಸಭೆ ಚುನಾವಣೆಗೆ ಸೆಮಿಫೈನಲ್ ಎಂದೇ ಪರಿಗಣಿಸಲಾಗಿರುವ ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್‌ಗಢ ಮತ್ತು ತೆಲಂಗಾಣ ವಿಧಾನಸಭೆ ಚುನಾವಣೆಯ ಫಲಿತಾಂಶ ಭಾನುವಾರ ಪ್ರಕಟವಾಗಲಿದೆ.

ರಾಜಸ್ಥಾನ ಮತ್ತು ಛತ್ತೀಸ್‌ಗಢದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಮತ್ತು ಮಧ್ಯಪ್ರದೇಶದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ನಡುವೆ ಈ ಮೂರು ರಾಜ್ಯಗಳಲ್ಲಿ ನೇರ ಹಣಾಹಣಿ ಇದೆ. ತೆಲಂಗಾಣದಲ್ಲಿ ಕೆ ಚಂದ್ರಶೇಖರ್ ರಾವ್ ನೇತೃತ್ವದ ಭಾರತ್ ರಾಷ್ಟ್ರ ಸಮಿತಿ(ಬಿಆರ್‌ಎಸ್) ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದೆ.

ತೆಲಂಗಾಣ ಮತ್ತು ಛತ್ತೀಸ್‌ಗಢದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ಹಲವು ಚುನಾವಣೋತ್ತರ ಸಮೀಕ್ಷೆಗಳು ಭವಿಷ್ಯ ನುಡಿದಿದ್ದು, ಮಧ್ಯಪ್ರದೇಶ ಮತ್ತು ರಾಜಸ್ಥಾನದಲ್ಲಿ ಬಿಜೆಪಿ – ಕಾಂಗ್ರೆಸ್ ನಡುವೆ ತೀವ್ರ ಪೈಪೋಟಿ ಇದೆ ಎಂದು ಹೇಳಿವೆ.

ಮಧ್ಯಪ್ರದೇಶದ 230, ಛತ್ತೀಸ್‌ಗಢದ 90, ತೆಲಂಗಾಣದ 119 ಮತ್ತು ರಾಜಸ್ಥಾನದ 199 ಸ್ಥಾನಗಳಿಗೆ ಚುನಾವಣೆ ನಡೆದಿದ್ದು, ಭಾನುವಾರ ಬೆಳಗ್ಗೆ 8 ಗಂಟೆಗೆ ಬಿಗಿ ಭದ್ರತೆಯ ನಡುವೆ ಅಂಚೆ ಮತಪತ್ರಗಳ ಎಣಿಸುವ ಮೂಲಕ ಮತ ಎಣಿಕೆ ಆರಂಭವಾಗಲಿದೆ. ಅಭ್ಯರ್ಥಿ ಸಾವನ್ನಪ್ಪಿದ ಕಾರಣ ರಾಜಸ್ಥಾನದಲ್ಲಿ ಒಂದು ಕ್ಷೇತ್ರದ ಮತದಾನವನ್ನು ಮುಂದೂಡಲಾಗಿದೆ.

ಮತ ಎಣಿಕೆಗೆ ಮೂರು ಹಂತದ ಭದ್ರತಾ ವ್ಯವಸ್ಥೆ ಮಾಡಲಾಗಿದ್ದು, ಪಾಸ್ ಹೊಂದಿರುವವರಿಗೆ ಮಾತ್ರ ಮತ ಎಣಿಕೆ ಕೇಂದ್ರಗಳಿಗೆ ಪ್ರವೇಶ ನೀಡಲಾಗುವುದು ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.



## ಬಿಜೆಪಿ–ಕಾಂಗ್ರೆಸ್ ಮಧ್ಯೆ ನೇರ ಪೈಪೋಟಿ

ಕರ್ನಾಟಕದಲ್ಲಿ ಕಳೆದ ಮೇ ತಿಂಗಳಲ್ಲಿ ಬಿಜೆಪಿಯಿಂದ ಅಧಿಕಾರ ಕಿತ್ತುಕೊಂಡ ಕಾಂಗ್ರೆಸ್ ಈಗ, ಮಧ್ಯಪ್ರದೇಶ ಮತ್ತು ತೆಲಂಗಾಣದ ಮೇಲೆ ಕಣ್ಣಿಟ್ಟಿದೆ. ಅಲ್ಲದೆ ರಾಜಸ್ಥಾನ ಮತ್ತು ಛತ್ತೀಸ್‌ಗಢದಲ್ಲಿ ಅಧಿಕಾರ ಉಳಿಸಿಕೊಳ್ಳುವ ನಿರೀಕ್ಷೆಯಲ್ಲಿದೆ.


ಮಧ್ಯ ಪ್ರದೇಶದ 230 ವಿಧಾನಸಭೆ ಕ್ಷೇತ್ರಗಳಿಗೆ ಚುನಾವಣೆ ನಡೆದಿದ್ದು, ಬಹುತೇಕ ಕ್ಷೇತ್ರಗಳಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ಮಧ್ಯೆ ನೇರ ಪೈಪೋಟಿ ಇದೆ. ಅದರಲ್ಲೂ, ಕಳೆದ ಬಾರಿ ಬಿಜೆಪಿಗಿಂತ ಹೆಚ್ಚಿನ ಸ್ಥಾನ ಪಡೆದಿದ್ದ ಕಾಂಗ್ರೆಸ್‌ಅನ್ನು ಬಿಜೆಪಿ ಓವರ್‌ಟೇಕ್ ಮಾಡಿ ಅಧಿಕಾರ ಹಿಡಿದಿದೆ. ಈಗ ಮತ್ತೆ ಬಹುಮತ ಸಾಧಿಸಿ ಅಧಿಕಾರದ ಗದ್ದುಗೆಯೇರಲು ಕಾಂಗ್ರೆಸ್ ಇನ್ನಿಲ್ಲದ ರಣತಂತ್ರ ರೂಪಿಸಿದೆ. ಮತ್ತೊಂದೆಡೆ, ಕಳೆದ ಬಾರಿ ಸಾಧಿಸದ ಬಹುಮತವನ್ನು ಈ ಬಾರಿ ಸಾಧಿಸುವ ಮೂಲಕ ಮತ್ತೆ ಅಧಿಕಾರ ಹಿಡಿಯಲು ಹವಣಿಸುತ್ತಿದೆ. ಹಾಗಾಗಿ, ಈ ಬಾರಿಯ ಚುನಾವಣೆಯು ತೀವ್ರ ಹಣಾಹಣಿಯಿಂದ ಕೂಡಿದೆ.

ರಾಜಸ್ಥಾನದಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ಮಧ್ಯೆ ನೇರ ಹಣಾಹಣಿ ಇದೆ. ಅಶೋಕ್ ಗೆಹ್ಲೋಟ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಸ್ತಿತ್ವದಲ್ಲಿದ್ದು, ಈ ಬಾರಿಯೂ ಗೆದ್ದು ಬೀಗುವ ಉತ್ಸಾಹದಲ್ಲಿದೆ. ಮತ್ತೊಂದೆಡೆ, 2018ರಲ್ಲಿ ಅಧಿಕಾರ ಕಳೆದುಕೊಂಡಿರುವ ಬಿಜೆಪಿಯು ಈ ಬಾರಿ ಗೆದ್ದು, ಮತ್ತೆ ಅಧಿಕಾರ ಪಡೆಯಲು ಯತ್ನಿಸುತ್ತಿದೆ. ಹಾಗಾಗಿಯೇ, ಚುನಾವಣೆ ಪ್ರಚಾರದ ವೇಳೆ ಕಾಂಗ್ರೆಸ್ ಹಾಗೂ ಬಿಜೆಪಿ ಜನರಿಗೆ ಉಚಿತ ಕೊಡುಗೆಗಳ ಮಹಾಪೂರವೇ ಹರಿಸಿವೆ. ಆದರೆ ಮತದಾರನ ಒಲವು ಯಾರ ಪರ ಇದೆ ಎಂಬುದು ನಾಳೆ ಬಹಿರಂಗವಾಗಲಿದೆ.

### ರಾಜ ನುಡಿ

ಸುರೂಪಿ ಚಿಟ್ಟೆಯಾಗಿ ಪ್ರಸಿದ್ಧಿ ಪಡೆಯೋಕೆ, ಕುರೂಪಿ ಕಂಬಳಿಹುಳು (caterpiller) ವಾಗಿ ಎಲ್ಲಾ ಕೆಲಸವನ್ನು ಶ್ರಮವಹಿಸಿ ಮುಂಚೆಯೇ ಮಾಡಿರಬೇಕು. ಶ್ರಮವೇ ಸುಂದರ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 246

**ಕರಸ್ಥಲದ ಚುಳುಕು**

*ಪಾತಾಳವಿತ್ತಿತ್ತ, ಪಾದಂಗಳತ್ತತ್ತ,*
*ದಶದಿಕ್ಕು ಇತ್ತಿತ್ತ, ದಶಭುಜಂಗಳತ್ತತ್ತ,*
*ಬ್ರಹ್ಮಾಂಡವಿತ್ತಿತ್ತ, ಮಣಿಮುಕುಟವತ್ತತ್ತ,*
*ಚೆನ್ನಮಲ್ಲಿಕಾರ್ಜುನಯ್ಯಾ,*
*ನೀವೆನ್ನ ಕರಸ್ಥಲಕ್ಕೆ ಬಂದು ಚುಳುಕಾದಿರಲ್ಲಾ ಲಿಂಗವೆ.*
*– ಅಕ್ಕಮಹಾದೇವಿಯವರು*

ಬಸವಣ್ಣನವರ ವಚನಗಳು ಅಂದು ಇತರೆ ಶರಣರ ಮೇಲೆ ಪ್ರಭಾವ ಬೀರಿದ್ದವು ಎಂಬುದಕ್ಕೆ ಈ ವಚನವೇ ಸಾಕ್ಷಿ. ಅಲ್ಲಿ ಬಸವಣ್ಣನವರು ಕೂಡಲಸಂಗಮದೇವರ ಸ್ವರೂಪವನ್ನು ವಿವರಿಸಿದಂತೆ ಜಗದಗಲ ಮುಗಿಲಗಲ ಮಿಗೆಯಗಲ ನಿಮ್ಮಗಲ, ಪಾತಾಳದಿಂದವೆ ಅತ್ತತ್ತ ನಿಮ್ಮ ಶ್ರೀಚರಣ, ಬ್ರಹ್ಮಾಂಡದಿಂದವೆ ಅತ್ತತ್ತ ನಿಮ್ಮ ಶ್ರೀಮಕುಟ, ಅಗಮ್ಯ ಅಗೋಚರ ಅಪ್ರತಿಮ ಲಿಂಗವೆ, ಕೂಡಲ ಸಂಗಮದೇವಯ್ಯಾ, ಎನ್ನ ಕರಸ್ಥಲಕ್ಕೆ ಬಂದು ಚುಳುಕಾದಿರಯ್ಯಾ. ಎಂದಿರುವ ಧಾಟಿಯಲ್ಲೇ ಅಕ್ಕಮಹಾದೇವಿಯವರು ಚೆನ್ನಮಲ್ಲಿಕಾರ್ಜುನ ನಿಲುವನ್ನು ನಿರೂಪಿಸಿದ್ದಾರೆ. ಅದರೆ ಇಲ್ಲಿ ನಾವು ಕಾಣುವ ಪ್ರಮುಖ ವ್ಯತ್ಯಾಸವೆಂದರೆ ಅಕ್ಕಮಹಾದೇವಿಯವರು ಚೆನ್ನಮಲ್ಲಿಕಾರ್ಜುನನ (ಮಹಾಲಿಂಗ) ನಿಜ ನಿಲುವಿನೆದರು ಪಾತಾಳ, ದಶದಿಕ್ಕು ಮತ್ತು ಬ್ರಹ್ಮಾಂಡಗಳು ಇತ್ತಿತ್ತ(ಸಂಕುಚಿತ/ಚಿಕ್ಕವು)ಎನ್ನುವಲ್ಲಿ ಜಗವೆಲ್ಲಾ ವ್ಯಾಪಿಸಿರುವ ಮಹಾಲಿಂಗದ ಪಾದ, ದಶಭುಜ, ಮಣಿಮುಖುಟಗಳೇ ಜಗದ್ವ್ಯಾಪಿಸಿವೆ ಎನ್ನುವಲ್ಲಿ ಆಧುನಿಕ ವಿಜ್ಞಾನಿಗಳು ಅಳೆದಂತೆ ನಮ್ಮ ಗೋಚರ ಬ್ರಹ್ಮಾಂಡದ ವ್ಯಾಪ್ತಿ 46.5 billion light-years and its diameter about 28.5 gigaparsecs (93 billion light-years, 8.8×1023kilometres or 5.5×1023 miles). ಇದರ ಆಚೆಗಿನ ಬ್ರಹ್ಮಾಂಡದ ವಿಸ್ತಾರವನ್ನು ಶರಣರು ಕಂಡಿರುವುದನ್ನು ಅವರು ವಚನಗಳಿಂದ ಅರಿಯಬಹುದು.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಡಿ.6ರಿಂದ ಡಾ.ಅಂಬೇಡ್ಕರ ಛಾಯಾಚಿತ್ರ ಪ್ರದರ್ಶನ & ನುಡಿ ನಮನ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಸಾರಿಪುತ್ರ ಭೋಧಿಮ್ಮ ಬುದ್ಧ ವಿಹಾರದಲ್ಲಿ ಡಿ. 6ರಿಂದ 8ರವರೆಗೆ ಬೆಳಿಗ್ಗೆ 10 ರಿಂದ ರಾತ್ರಿ 9 ಗಂಟೆವರೆಗೆ ವಿಶ್ವರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 67ನೇ ಮಹಾಪರಿನಿರ್ವಾಣ ದಿನದ ನಿಮಿತ್ಯ ಅಪರೂಪದ ಛಾಯಾಚಿತ್ರಗಳ ಪ್ರದರ್ಶನ ಮತ್ತು ನುಡಿನಮನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ನಗರದ ಬೌದ್ಧವಿಹಾರ ನಿರ್ಮಾಣ ಸಮಿತಿ ಅಧ್ಯಕ್ಷ ರಾಜಶೇಖರ ಯಡಹಳ್ಳಿ ಹೇಳಿದ್ದಾರೆ.

ನಗರದ ಖಾಸಗಿ ಹೊಟೆಲನಲ್ಲಿ ಶನಿವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ನಿಪ್ಪಾಣಿಯ ದೀಪಕ ಆಕಾರಾಮ ಮಥಾಳೆ ಮತ್ತು ನಂದಕುಮಾರ ಆಕಾರಾಮ ಮಥಾಳೆ ಅವರು ಸಂಗ್ರಹಿಸಿರುವ ಅಪರೂಪದ ಛಾಯಾಚಿತ್ರಗಳ ಪ್ರದರ್ಶನ ಇದಾಗಿದೆ. ಡಿ.6ರಂದು ಸಂಜೆ 6ಗಂಟೆಗೆ ಡಾ.ಅಂಬೇಡ್ಕರ ಅವರ ನುಡಿನಮನ ಕಾರ್ಯಕ್ರಮವೂ ಜರುಗಲಿದೆ. ಕಾರಣ ಜಿಲ್ಲೆಯ ಡಾ. ಬಾಬಾಸಾಹೇಬ ಅಂಬೇಡ್ಕರ ಅನುಯಾಯಿಗಳು, ಪ್ರಗತಿಪರ ಚಿಂತಕರು, ಬುದ್ಧನುಯಾಯಿಗಳು ಈ ಛಾಯಾಚಿತ್ರಗಳ ಪ್ರದರ್ಶನ ಮತ್ತು ನುಡಿನಮನ ಕಾರ್ಯಕ್ರಮಕ್ಕೆ ಅಧಿಕ ಸಂಖ್ಯೆಯಲ್ಲಿ ಆಗಮಿಸಬೇಕೆಂದು ರಾಜಶೇಖರ ಯಡಹಳ್ಳಿ ಕೋರಿದ್ದಾರೆ.

ಬೌದ್ಧವಿಹಾರ ನಿರ್ಮಾಣ ಸಮಿತಿ ಉಪಾಧ್ಯಕ್ಷ ಶಶಿಕಾತ ಹೊನವಾಡಕರ, ಪ್ರಧಾನ ಕಾರ್ಯದರ್ಶಿ ನಾಗರಾಜ ಲಂಬು, ಹಿರಿಯ ಪತ್ರಕರ್ತ ಅನೀಲ ಹೋಸಮನಿ, ಇನಾಮದಾರ, ಯಡಹಳ್ಳಿ, ಲಿಂಬಾಳ್ಕರ, ರಾಜೇಶ ಹಳ್ಳದಮನಿ, ಬ್ಯಾಳಿ, ರಮೇಶ ತೊರವಿ ಸೇರಿದಂತೆ ಬೌದ್ಧ ವಿಹಾರ ನಿರ್ಮಾಣ ಸಮಿತಿ ನಿರ್ದೇಶಕರು ಹಾಗೂ ಸಲಹಾ ಸಮಿತಿ ಸದಸ್ಯರಿದ್ದರು.



## ಕಾರಾಗೃಹ ಕಾಮಗಾರಿ ಪರಿಶೀಲಿಸಿದ ಡಿಸಿ ಟಿ.ಭೂಬಾಲನ್



**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಬಳಿಯ ಅರಕೇರಿ ಗ್ರಾಮದ ಹತ್ತಿರ ನಿರ್ಮಾಣವಾಗುತ್ತಿರುವ ನೂತನ ಕೇಂದ್ರ ಕಾರಾಗೃಹದ ಕಾಮಗಾರಿ ಸ್ಥಳಕ್ಕೆ ಶುಕ್ರವಾರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನೂತನ ಕೇಂದ್ರ ಕಾರಾಗೃಹಕ್ಕೆ ಭೂತನಾಳ ಕೆರೆಯಿಂದ ನೀರಿನ ಸೌಲಭ್ಯವನ್ನು ಒದಗಿಸುವ 650.00 ಲಕ್ಷಗಳ ಅಂದಾಜು ವೆಚ್ಚದ ಪ್ರಸ್ತಾವನೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಅವರು, ನೂತನ ಕೇಂದ್ರ ಕಾರಾಗೃಹದ ಕಾಮಗಾರಿಗಳ ಎಲ್ಲ ವಿಭಾಗಗಳ ವೀಕ್ಷಣೆ ನಡೆಸಿ, ಕಾರಾಗೃಹದ ಹೊರವೃತ್ತದ ಸುತ್ತುವರಿಗೆ ತೆರಳಿ ಭದ್ರತಾ ಗೋಡೆಯನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಕಾರಾಗೃಹ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಅಭಿಯಂತರರು ಉಪಸ್ಥಿತರಿದ್ದರು.

## ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಸಿದ್ಧ :ಯಡಹಳ್ಳಿ

ವಿಜಯಪುರ: 2024 ಲೋಕಸಭೆ ಸಾರ್ವತ್ರಿಕ ಚುನಾವಣೆಯ ವಿಜಯಪುರ ಮೀಸಲು ಕ್ಷೇತ್ರದ ಕಾಂಗೆಸ್ ಪಕ್ಷದ ಪ್ರಬಲ ಆಕಾಂಕ್ಷಿ ತಾವಾಗಿರುವುದಾಗಿ ಕೆಪಿಸಿಸಿ ಕಾರ್ಮಿಕ ಘಟಕದ ರಾಜ್ಯ ಕಾರ್ಯದರ್ಶಿ ಹಾಗು ನಿವೃತ್ತ ಅಧಿಕಾರಿ ರಾಜಶೇಖರ ಯಡಹಳ್ಳಿ ಸ್ಪಷ್ಟಪಡಿಸಿದರು.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯಪುರ ಮೀಸಲು ಕ್ಷೇತ್ರದಲ್ಲಿ ಕಳೆದ 3 ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷವು ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ತಮ್ಮ ಸಹೋದರ ಸಮಾಜವಾದ ಬಂಜಾರ ಸಮುದಾಯಕ್ಕೆ ಅವಕಾಶ ಕೊಟ್ಟಿತ್ತು. ಆದರೆ ಗೆಲುವು ಸಾಧ್ಯವಾಗಲಿಲ್ಲ. ಈ ಕಾರಣದಿಂದ ಬರುವ ಚುನಾವಣೆಯಲ್ಲಿ ಪರಿಶಿಷ್ಠ ಜಾತಿಯ ಪ್ರಭಲ ಜಾತಿಯಾದ ಛಲವಾದಿ ಸಮುದಾಯಕ್ಕೆ ಪಕ್ಷದ ಟಿಕೆಟ್ ಕೊಟ್ಟರೆ ಕಾಂಗ್ರೆಸ್ ಪಕ್ಷದ ಗೆಲುವು ಖಚಿತವೆಂದು ಜಿಲ್ಲೆಯ ಹಿರಿಯ ನಾಯಕರ ಚಿಂತನೆಯಾಗಿದೆ ಎಂದು ಹೇಳಿದರು.

ನಾನು ಜಿಲ್ಲೆಯಲ್ಲಿ 20–22 ವರ್ಷ ವಿವಿಧ ಹಂತದ ಅಧಿಕಾರಿಯಾಗಿ ಕಾರ್ಯನಿರ್ವಹಿಸಿರುವೆ. ಜಿಲ್ಲೆಯ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರೀಯನಾಗಿರುವ ನನಗೆ ನಮ್ಮ ಬಲಗೈ ಸಮುದಾಯವಲ್ಲದೇ ಎಲ್ಲ ಸಮಾಜಗಳೊಂದಿಗೆ ಉತ್ತಮ ಬಾಂದವ್ಯ ಹೊಂದಿರುವೆ. ಈ ಕ್ಷೇತ್ರದಲ್ಲಿ ನಮ್ಮ ಸಮಾಜದ 2.5ಲಕ್ಷ ಬಂಧುಗಳ ಪ್ರೋತ್ಸಾಹ ಮತ್ತು ಬೆಂಬಲ ನನಗಿದೆ. ರಾಜಕೀಯಕ್ಕೆ ನಾನು ಹೊಸಬನಾದರೂ ಸಮಾಜ ಸೇವೆಗೆ ನಾನು ಹೊಸಬನಲ್ಲ. ಈಗಾಗಲೇ ನಮ್ಮ ನಾಯಕರಾದ ಮಲ್ಲಿಕಾಜುನ ಖರ್ಗೆ, ಜಿ.ಪರಮೇಶ್ವರ ಹಾಗೂ ಮಹಾದೇವಪ್ಪ ಅವರನ್ನು ಕಂಡು ನನ್ನ ಇಚ್ಛೆ ಕುರಿತು ಮನವರಿಕೆ ಮಾಡಲಾಗಿದೆ. ನನಗೆ ಕಾಂಗ್ರೆಸಿ ಪಕ್ಷದ ಟಿಕೆಟ್ ಸಿಗುವ ಭರವಸೆ ಇದ್ದು, ಯಾವುದಕ್ಕೂ ಪಕ್ಷದ ನಾಯಕರ ನಿರ್ಣಯವನ್ನು ಗೌರವಿಸಿ ಪಕ್ಷದ ಗೆಲುವಿಗೆ ಶ್ರಮಿಸುವುದಾಗಿ ರಾಜಶೇಖರ ಯಡಹಳ್ಳಿ ಸ್ಪಷ್ಟಪಡಿಸಿದರು.

## ವರ್ತನೆ ಸರಿ ಇದ್ರೆ ನಮ್ಮನ್ನು ಬೆಳೆಸುತ್ತಾರೆ :ಸಂಸದ ಜಿಗಜಿಣಗಿ

**ಉದಯರಶ್ಮಿ ನ್ಯೂಸ್**

ಇಂಡಿ: ಈ ಭಾಗದ ಜನರ ಆಶೀರ್ವಾದದಿಂದ ಸತತ 45 ವರ್ಷಗಳ ಕಾಲ ರಾಜಕಾರಣ ಮಾಡಿದ್ದೇನೆ. ಜಿಲ್ಲೆಗೆ ಒಂದು ಲಕ್ಷ ಕೋಟಿಗೂ ಅಧಿಕ ಅನುದಾನ ತಂದು ಅಭಿವೃಧ್ಧಿಪಡಿಸಿದ್ದೇನೆ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಅವರು ಶನಿವಾರ ಪಟ್ಟಣದ ಶಾಂತೇಶ್ವರ ಮಂಗಲ ಕಾರ್ಯಾಲಯದ ಆವರಣದಲ್ಲಿ ಭಾರತೀಯ ಜನತಾ ಪಾರ್ಟಿ ಇಂಡಿ ಮತ್ತು ಚಡಚಣ ಮಂಡಲದ ಹಿಂದುಳಿದ ವರ್ಗಗಳ ಮೋರ್ಚಾ ಸಭೆ, ಹಾಗೂ ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲೆಗೆ ಎನ್‌ಟಿಪಿಸಿ, ವಿಮಾನ ನಿಲ್ದಾಣ, ನೀರಾವರಿ ಯೋಜನೆಗಳು, ರಸ್ತೆಗಳನ್ನು ಮೇಲ್ದರ್ಜೆಗೇರಿಸಿ ಅಭಿವೃಧ್ಧಿಪಡಿಸುವದು ಇಂತಹ ಹಲವು ಕಾರ್ಯವನ್ನು ಮಾಡಿದ ತೃಪ್ತಿ ನನಗಿದೆ. ಕೆಲವೊಬ್ಬರು ಅಂಗಿಯ ತೋಳು ಏರಿಸುತ್ತ, ಈ ಎಲ್ಲ ಕೆಲಸ ನಾ ಮಾಡೀನಿ, ನಾ ಮಾಡೀನಿ ಅಂತ ಹೇಳ್ಕೋತ್ ತಿರಗಾಡ್ತಾರ, ತಿರಗಾಡವ್ರ ತಿರಗಾಡಲಿ, ಜನರಿಗೆ ಎಲ್ಲಾ ಗೊತ್ತದ ಎಂದರು.

2004 ರಲ್ಲಿ ರಾಮಕೃಷ್ಣ ಹೆಗಡೆ ಅವರ ಆರೋಗ್ಯ ವಿಚಾರಿಸಲು ಅವರ ಮನೆಗೆ ಹೋಗಿದ್ದೆ, ಆಗ ಅವರು ನನ್ನನ್ನು ಪಕ್ಕದಲ್ಲಿ ಕೂರಿಸಿ ರಮೇಶ ನಮ್ಮ ಪಾರ್ಟಿ ಇನ್ನು ಬೆಳೆಂಗಿಲ್ಲಾ, ನೀ ಬಿಜೆಪಿ ಪಕ್ಷಕ್ಕ ಹೋಗು, ಪ್ರತೀ ಹಳ್ಳಿಯಿಂದ ಜನ ಬಿಜೆಪಿ ಮಾಡ್ತಾರ ಅತ್ತ ಹೇಳಿದ್ರು, ಅವರ ಮಾತಿಗೆ ಓಗೊಟ್ಟು ಪ್ರಥಮವಾಗಿ ನಾನು ಉತ್ತರ ಕರ್ನಾಟಕದ ಎಲ್ಲ ಲಿಂಗಾಯತ ಮುಖಂಡರಿಗೆ ಮಾತನಾಡಿ, ಎಲ್ಲರೂ ಬಿಜೆಪಿ ಸೇರೂನು ಅತ್ ಮೊದಲು ನಾನೇ ಸೇರ್‌ಕೊಂಡೆ. ಮುಂದೆ ತಂಡೋಪ ತಂಡವಾಗಿ ಎಲ್ಲರೂ ಬಿಜೆಪಿಗೆ ಸೇರಿದ್ರು ಎಂದು ಹಳೆಯ ಕಾಲದ ತಮ್ಮ ರಾಜಕಾರಣದ ಕುರಿತು ಮೆಲುಕು ಹಾಕಿದರು.



ನಾವು ಆಡುವ ಮಾತು, ನಮ್ಮ ವರ್ತನೆ ಸರಿ ಇದ್ರೆ ಎಲ್ಲರೂ ನಮ್ಮನ್ನು ಗೌರವಿಸುತ್ತಾರೆ, ಬೆಳೆಸುತ್ತಾರೆ. ನನ್ನ ವೈಯುಕ್ತಿಕ ಬೆಳವಣಿಗೆಗೆ ನನ್ನ ವರ್ತನೆಯ ಜೊತೆಗೆ ಇಂಡಿ ತಾಲೂಕಿನ ಹಲವು ಹಿರಿಯರ ಸಹಕಾರವಿದೆ ಎಂದರು.

ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯ ರಾಜ್ಯ ಸಂಚಾಲಕ ವಿವೇಕ ಡಬ್ಬಿ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿಯವರ, ಬಡ ವರ್ಗಗಳ ಮತ್ತು ಹಿಂದುಳಿದ ಜನರ ಶ್ರೇಯೋಬಿವೃಧ್ಧಿಗೆ ವಿಶ್ವಕರ್ಮ ಹೆಸರಿನಲ್ಲಿ ಯೋಜನೆ ರೂಪಿಸಿದ್ದು ಸಂತಸ ತಂದಿದೆ. ಈ ಯೋಜನೆಗೆ ಅರ್ಜಿ ಹಾಕಿದರೆ ಸರಕಾರವೇ ಐದು ದಿನಗಳ ಕಾಲ ತರಬೇತಿ ನೀಡಲಿದೆ. ಮುಂದೆ ಮೂರು ದಿನದಲ್ಲಿ ಫಲಾನುಭವಿ ಬ್ಯಾಂಕ್ ಖಾತೆಗೆ 15 ಸಾವಿರ ಹಣ ಜಮಾ ಆಗುತ್ತದೆ. ತದನಂತರ ಒಂದು ವಾರದಲ್ಲಿ 1 ಲಕ್ಷ ರೂಪಾಯಿ ಹಣ ಜಮಾ ಆಗುತ್ತದೆ. ಇದನ್ನು 18 ತಿಂಗಳುಗಳಲ್ಲಿ ಸರಿಯಾಗಿ ತುಂಬಬೇಕು. ಅದಕ್ಕೆ ಬಡ್ಡಿ ಇರಲ್ಲ. ಆ 18 ತಿಂಗಳು ಸರಿಯಾಗಿ ಹಣ ಕಟ್ಟಿದರೆ, ಮುಂದೆ 2 ಲಕ್ಷದಿಂದ 4 ಲಕ್ಷದವರೆಗೆ 5 ಪ್ರತಿಶತ ಬಡ್ಡಿದರದಲ್ಲಿ ಹಣ ನೀಡಲಾಗುತ್ತದೆ. ಮೋದಿಯವರು ಹಿಂದುಳಿದ ವರ್ಗಗಳ ಜನರ ಅನುಕೂಲಕ್ಕಾಗಿ ಈ ಯೋಜನೆ ರೂಪಿಸಿದ್ದು, ವಿಶ್ವಕರ್ಮ, ಕಂಬಾರ, ಕುಂಬಾರ, ಅಗಸರ, ಗೌಂಡಿ, ಚರ್ಮಕಾರ, ಸೇರಿದಂತೆ 18 ಜಾತಿಗಳ ಜನರಿಗೆ ಈ ಯೋಜನೆಯ ಲಾಭ ಸಿಗಲಿದೆ ಎಂದರು.

ಬಿಜೆಪಿ ಮುಖಂಡರಾದ ಮಲ್ಲಿಕಾರ್ಜುನ ಜೋಗೂರ, ಮಲ್ಲಿಕಾರ್ಜುನ ಕಿವುಡೆ, ಕಾಸುಗೌಡ ಬಿರಾದಾರ, ಸಾಬಣ್ಣ ಮಾಶ್ಯಾಳ, ಸಿದ್ಧಲಿಂಗ ಹಂಜಗಿ, ಅನೀಲ ಜಮಾದಾರ, ಸಂಜೀವ ಐಹೊಳೆ ಮತ್ತಿತರರು ಮಾತನಾಡಿದರು.

ವೇದಿಕೆಯಲ್ಲಿ ಹಣಮಂತ್ರಾಯಗೌಡ ಪಾಟೀಲ, ರಾಮ ಅವಟಿ, ರಾಜಕುಮಾರ ಸಗಾಯಿ, ವಿಜಯಲಕ್ಷ್ಮೀ ರೂಗಿಮಠ, ಶ್ರೀಶೈಲ ಮದರಿ ಸೇರಿದಂತೆ ಇನ್ನಿತರರು ಇದ್ದರು.

# ಸಂತೋಷ ನವಲಗುಂದಗೆ ಡಾಕ್ಟರೇಟ್

ಉದಯರಶ್ಮಿ ನ್ಯೂಸ್



ಯಡ್ರಾಮಿ: ಕಲಬುರಗಿಯ ಡಾ.ಬಿ.ಡಿ.ಜತ್ತಿ ವಚನ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಸಂತೋಷ ನವಲಗುಂದ ಇವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಲಭಿಸಿದೆ. “ ಸಗರ ಕೃಷ್ಣಾಚಾರ್ಯರ ಸಾಹಿತ್ಯ – ಸ್ವರೂಪ ಮತ್ತು ವಿಶ್ಲೇಷಣೆ “ ಎಂಬ ವಿಷಯದ ಮೇಲೆ ಪಿಎಚ್.ಡಿ. ಮಹಾಪ್ರಬಂಧ ಮಂಡಿಸಿದ್ದಕ್ಕೆ ಕನ್ನಡ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಲಭಿಸಿದೆ. ಡಾ.ಪಾಟೀಲ ಶ್ರೀಕಾಂತ ಮಾರ್ಗದರ್ಶಕರಾಗಿದ್ದರು.

# ಡಿ.3ರಂದು ಶಿವಚಿದಂಬರ ಜಯಂತೋತ್ಸವ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಮನಗೂಳಿ ರಸ್ತೆಯಲ್ಲಿರುವ ಶ್ರೀ ಶಿವಚಿದಂಬರ ದೇವಾಲಯದಲ್ಲಿ ಇದೇ ದಿನಾಂಕ 03 ರಂದು ಶ್ರೀ ಶಿವಚಿದಂಬರ ಜಯಂತೋತ್ಸವ ಶ್ರದ್ಧಾ–ಭಕ್ತಿಪೂರ್ವಕವಾಗಿ ನಡೆಯಲಿದೆ.

ದಿ.3 ರಂದು ಬೆಳಿಗ್ಗೆ 6 ಕ್ಕೆ ಕಾಕಡಾರತಿ, ಬೆಳಿಗ್ಗೆ 7 ಕ್ಕೆ ಶ್ರೀ ಶಿವಚಿದಂಬರೇಶ್ವರರಿಗೆ ಅಭಿಷೇಕ, ಬೆಳಿಗ್ಗೆ 8 ಕ್ಕೆ ಶ್ರೀ ಯೋಗಿಶ್ವರ ಯಾಜ್ಞವಲ್ಕ್ಯರ ಅಷ್ಟೋತ್ತರ ನಡೆಯಲಿದೆ. ಅದೇ ದಿನ ಬೆಳಿಗ್ಗೆ 10 ಕ್ಕೆ ಶ್ರೀ ರಾಮ ಜಯರಾಮ ಜಯರಾಮ ಎಂಬ ಜಪ ಸಂಕಲ್ಪಕ್ಕೆ ಪೂರಕವಾದ ಕಾರ್ಯಕ್ರಮ ನಡೆಯಲಿದೆ. ಮಧ್ಯಾಹ್ನ 12 ಕ್ಕೆ ತೊಟ್ಟಿಲೋತ್ಸವ ನಡೆಯಲಿದೆ. ಅದೇ ದಿನ ಮಧ್ಯಾಹ್ನ 12.30 ಕ್ಕೆ ಶ್ರೀ ಸಂತ ಶಂಕರಣ್ಣಾ ಅನಂತಪೂರ ಅವರಿಂದ ಪ್ರವಚನ, ಮಧ್ಯಾಹ್ನ 1.30 ಕ್ಕೆ ಮಂಗಳಾರತಿ, ಮಹಾಪ್ರಸಾದ ವಿತರಣೆ ನಡೆಯಲಿದೆ. ಸಂಜೆ 7 ಕ್ಕೆ ಶಿವಚಿಂದಬರ ಹಾಗೂ ಕಾರ್ತಿಕೋತ್ಸವ ನಡೆಯಲಿದೆ ಎಂದು ವಿಜಯ ಜೋಶಿ ತಿಳಿಸಿದ್ದಾರೆ.

# ಕರ್ನಾಟಕ ಸುವರ್ಣ ಸಂಭ್ರಮದಡಿ ಕನ್ನಡ ಮಾಸಾಚರಣೆ



ಉದಯರಶ್ಮಿ ನ್ಯೂಸ್

ಗೋಲಗೇರಿ: ಇಲ್ಲಿಯ ಸರಕಾರಿ ಕನ್ನಡ ಹೆಣ್ಣುಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನವೆಂಬರ್ 4 ರಿಂದ 28 ರವರೆಗೆ ಸಿಂದಗಿ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಆರೀಫ್ ಬಿರಾದಾರ, ಕ್ಷೇತ್ರ ಸಮನ್ವಯಾಧಿಕಾರಿ ಐ.ಎಸ್. ಟಕ್ಕೆ ಹಾಗೂ ಗೋಲಗೇರಿ ಕ್ಲಸ್ಟರಿನ ಸಮೂಹ ಸಂಪನ್ಮೂಲ ವ್ಯಕ್ತಿ ಆರ್.ಎಸ್.ಬಿರಾದಾರ ಅವರ ಮಹತ್ವಾಕಾಂಕ್ಷೆಯ ಕ್ರಿಯಾಯೋಜನೆ ಅಡಿಯಲ್ಲಿ ಕನ್ನಡ ಮಾಸಾಚರಣೆ ಆಚರಿಸಲಾಯಿತು.

ಶಾಲೆಯ ಕನ್ನಡ ವಿಷಯ ಬೋಧಕರಾದ ಶಿಕ್ಷಕ, ಸಾಹಿತಿ, ವ್ಯಂಗ್ಯಚಿತ್ರಕಾರ ಶರಣು ಚಟ್ಟಿ ಅವರ ನೇತೃತ್ವದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿ ದಿನದ ಕೊನೆಯ ಅವಧಿಯಲ್ಲಿ ಕರ್ನಾಟಕ ಏಕೀಕರಣ ಹೋರಾಟಗಾರರ ಪರಿಚಯದೊಂದಿಗೆ, ಕನ್ನಡ ವ್ಯಾಕರಣ ಮಾಹಿತಿ, ಕನ್ನಡ ಅಂಕಿಗಳ ಬಳಕೆ, ಕನ್ನಡ ಸಾಹಿತಿಗಳ ಪರಿಚಯ, ಕನ್ನಡ ಸಾಹಿತ್ಯ ಪರಿಷತ್ತಿನ ಪರಿಚಯ, ಕಥೆ ಕಟ್ಟುವಿಕೆ, ಪ್ರಬಂಧ ಬರಹ, ಭಿತ್ತಿಪತ್ರ ರಚನೆ, ರಸಪ್ರಶ್ನೆ, ಗಾಯನ ಸ್ಪರ್ಧೆ ಸೇರಿದಂತೆ ಹಲವು ನಿಗದಿತ ಚಟುವಟಿಕೆಗಳನ್ನು ಏರ್ಪಡಿಸಿ ಕನ್ನಡ ಮಾಸಾಚರಣೆಯನ್ನು ಯಶಸ್ವಿಗೊಳಿಸಲಾಯಿತು.

ಕನ್ನಡ ಮಾಸಾಚರಣೆ ಅಂಗವಾಗಿ ಆಯೋಜಿಸಿದ ರಸಪ್ರಶ್ನೆ ಸ್ಪರ್ಧೆ, ಕಥೆ ಕಟ್ಟುವ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಗಾಯನ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರಮಾಣ ಪತ್ರದೊಡನೆ ಬರಹ ಪುಸ್ತಕ ಹಾಗೂ ಲೇಖನಿ ಬಹುಮಾನಗಳನ್ನು ನೀಡಿ ಪ್ರೋತ್ಸಾಹಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರುಗಳಾದ ರತನಸಿಂಗ್ ಬನಸಿ, ಸಹ ಶಿಕ್ಷಕಿಯರಾದ ಮಹಾದೇವಿ ಚೌಧರಿ, ದಾನಮ್ಮ ಮುಂಡಾಸೆ, ಪೂರ್ಣಿಮಾ ಸಜ್ಜನ, ಸಂಗೀತಾ ಡಾಲೆ ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಸುಷ್ಮಿತಾ ಜಾಲವಾದಿ ಪ್ರಾರ್ಥಿಸಿದರು. ಶಿಕ್ಷಕ ಶರಣು ಚಟ್ಟಿ ನಿರೂಪಿಸಿದರು. ಅತಿಥಿ ಶಿಕ್ಷಕ ರಾಜಶೇಖರ್ ಕರ್ನಾಳ ಸ್ವಾಗತಿಸಿದರು. ಅತಿಥಿ ಶಿಕ್ಷಕಿ ಅನಿತಾ ಕಾರನೂರ ವಂದಿಸಿದರು.

# ಡಿ.3 ರಂದು ಕ್ರಿಕೇಟ್ ಪ್ರೀಮಿಯರ್ ಲೀಗ್ ಮುಕ್ತಾಯ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಇಲ್ಲಿನ ವಿಬಿಸಿ ಹೈಸ್ಕೂಲ್ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದ್ದ ಮುದ್ದೇಬಿಹಾಳ ಕ್ರಿಕೇಟ್ ಪ್ರೀಮಿಯರ್ ಲೀಗ್ ಸೀಜನ್ 6 ನ ಮುಕ್ತಾಯ ಸಮಾರಂಭವನ್ನು ಡಿ.3 ರಂದು ಸಂಜೆ 5:30ಕ್ಕೆ ಹಮ್ಮಿಕೊಳ್ಳಲಾಗಿದೆ.

ಸಮಾರಂಭ'ದ ದಿವ್ಯ ಸಾನಿಧ್ಯವನ್ನು ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರು ಮತ್ತು ಮೌಲಾನಾ ಅಲ್ಲಾಭಕ್ಷ ಖಾಜಿ ವಹಿಸಲಿದ್ದಾರೆ. ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ ಅಧ್ಯಕ್ಷತೆ, ಸಮಾಜ ಸೇವಕ, ಅಸ್ಕಿ ಫೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿ, ಯಾಸೀನ್ ಸೋತೆ ಮುಖ್ಯ ಅತಿಥಿಗಳಾಗಿ ಸಮಾಜ ಸೇವಕ ಮಲ್ಲಿಕಾರ್ಜುನ ಮದರಿ, ಶಾಂತಗೌಡ ಪಾಟೀಲ ನಡಹಳ್ಳಿ, ಮಾಜಿ ಪುರಸಭೆ ಅಧ್ಯಕ್ಷೆ ಪ್ರತಿಭಾ ಅಂಗಡಗೇರಿ, ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ವಿ.ಎಂ.ನಾಗಠಾಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ದಿ ಕರ್ನಾಟಕ ಕೋ ಅಪ್ ಬ್ಯಾಂಕ್ ಅಧ್ಯಕ್ಷ ಸತೀಶ ಓಸ್ವಾಲ, ಪು.ಸ ಮಹೆಬೂಬ ಗೊಳಸಂಗಿ ಸೇರಿದಂತೆ ಮತ್ತೀತರರು ಅತಿಥಿಗಳಾಗಿ ಆಗಮಿಸಲಿದ್ದಾರೆ.

# ಸಂಖ್ಯಾಶಾಸ್ತ್ರ ವಿಷಯಕ್ಕೆ ಮಾಳಗೊಂಡ ಶೇ.100 ಅಂಕ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಬಿಎ ವಿಭಾಗದ ವಿದ್ಯಾರ್ಥಿ ವಿಜಯ ಮಾಳಗೊಂಡ ಅವರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಕಳೆದ ಸೆಪ್ಟಂಬರ್–ಅಕ್ಟೋಬರ್–2023 ನಡೆಸಿದ ವಿಶ್ವವಿದ್ಯಾಲಯದ 6 ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಸಂಖ್ಯಾಶಾಸ್ತ್ರ ಪತ್ರಿಕೆ 1 ಮತ್ತು 2 ರಲ್ಲಿ 100 ಕ್ಕೆ 100 ಅಂಕ ಪಡೆಯುವ ಮೂಲಕ ಸಾಧನೆ ಮಾಡಿದ್ದಾರೆ. ಸಾಧನೆಗೈದ ವಿದ್ಯಾರ್ಥಿಗೆ ಸಂಸ್ಥೆಯ ಆಡಳಿತಾಧಿಕಾರಿ ಡಾ.ಆರ್.ಬಿ.ಕೊಟ್ನಾಳ, ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಸಂಖ್ಯಾಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪಿ.ಎಸ್.ಹೊರಕೇರಿ, ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ ಎಂದು ಮಹಾವಿದ್ಯಾಲಯ ಪ್ರಕಟಣೆ ತಿಳಿಸಿದೆ.



# ಕತೆಗಳಲ್ಲಿ ದೇಸೀಯ ಶೈಲಿ ಮಾಯ :ಡಾ.ಯಾಕೊಳ್ಳಿ



ಉದಯರಶ್ಮಿ ನ್ಯೂಸ್

ಇಂಡಿ: ಗ್ರಾಮೀಣ ಕತೆಗಳು ನಮ್ಮ ಬದುಕಿನ ಕತೆಗಳೇ ಆಗಿವೆ, ಅಲ್ಲಿ ನಮ್ಮ ದೇಸಿಯ ಸೊಗಡು ಇತ್ತೀಚೆಗಿನ ದಿನಗಳಲ್ಲಿ ಮರೆಯಾಗುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ ಎಂದು ಬೆಳಗಾವಿ ಜಿಲ್ಲೆಯ ಯಕ್ಕುಂಡಿ ಸರಕಾರಿ ಪದವಿಪೂರ್ವ ಕಾಲೇಜಿ ಪ್ರಾಚಾರ್ಯ ಡಾ. ವೈ.ಎಂ.ಯಾಕೊಳ್ಳಿ ಹೇಳಿದರು.

ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗ ಹಾಗೂ ಕಡಣಿಯ ಬೆರಗು ಪ್ರಕಾಶನ ಸಂಸ್ಥೆಯ ಸಹಯೋಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಡಾ. ಪ್ರಕಾಶ ಗ.ಖಾಡೆ ಅವರ ಬಾಳುಕುನ ಪುರಾಣ ಕಥಾ ಓದು ಮತ್ತು ಸಂವಾದ ಕಾರ್ಯಕ್ರಮದಲ್ಲಿ ಬಾಳುಕುನ ಪುರಾಣ ಕತಾವಲೋಕನ ಕುರಿತು ಉಪನ್ಯಾಸ ನೀಡಿದರು.

ಇಂದಿನ ಕನ್ನಡದ ಕತೆಗಳಲ್ಲಿ ಮೆಟ್ರೊ ಜಗತ್ತು ಅನಾವರಣವಾಗುತ್ತಿರುವ ಈ ಹೊತ್ತಲ್ಲಿ ಬಾಳುಕುನ ಪುರಾಣದ ಮೂಲಕ ಕತೆಗಾರ ಗ್ರಾಮೀಣ ಪ್ರದೇಶದ ಜನರ ಜೀವನಶೈಲಿಗಳನ್ನು ಜಾನಪದೀಯಶೈಲಿಯಲ್ಲಿ ಹಿಡಿದಿಡುವ ಕಾರ್ಯ ಮೆಚ್ಚುಗೆ ಪಡುವಂತಹದ್ದು, ಕತೆಗಾರರು ಇಂತಹ ಸಂಗತಿಗಳನ್ನು ಬಹಳ ಸೂಕ್ಷ್ಮವಾಗಿ ಓದುಗರಿಗೆ ಕಟ್ಟಿಕೊಡುವ ಕೆಲಸ ಮಾಡಬೇಕು ಎಂದು ಆಶಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ವಿಭಾಗದ ಮುಖ್ಯಸ್ಥ ಡಾ ರಮೇಶ ಕತ್ತಿ ಮಾತನಾಡಿ, ಪ್ರಕಾಶ ಖಾಡೆ ಈ ನೆಲದ ಸತ್ವಯುತ ಬರಹಗಾರ, ಅವರ ಕತೆಗಳಲ್ಲಿ ಜಾನಪದೀಯ ಸೊಬಗು ಹೆಚ್ಚು ವಿಸ್ತಾರವನ್ನು ಪಡೆದಿದೆ, ಖಾಡೆ ಅವರು ಮಹತ್ವದ ಕತೆಗಾರರ ಸಾಲಿನಲ್ಲಿ ನಿಲ್ಲುತ್ತಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಆರ್. ಎಚ್.ರಮೇಶ ವಹಿಸಿಕೊಂಡು ಇಂತಹ ಕಾರ್ಯಕ್ರಮಗಳು ನಮ್ಮಲ್ಲಿ ಸಾಹಿತ್ಯಾಸಕ್ತಿಯನ್ನು ಮೂಡಿಸುವದಲ್ಲದೆ ನಮಗೂ ಬರಹದ ಪ್ರೇರಣೆಯಾಗಿದೆ ಇಂತಹ ಉಪಯುಕ್ತ ಕಾರ್ಯಕ್ರಮಗಳು ನಡೆಯಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಐಕ್ಯೂಐಸಿ ಸಂಯೋಜಕಿ ಡಾ. ಶೀರುನುಸಲ್ತಾನ ಇನಾಮದಾರ, ಪ್ರೊ.ತಿಪ್ಪಣ್ಣ.ಎಸ್. ವಗ್ಗಾಳ, ಪ್ರೊ ರಾಜಲಕ್ಷ್ಮೀ ಆರ್, ಸತೀಶಕುಮಾರ ಚುಂಚೂರ, ಪ್ರೊ. ಎಸ್.ಜೆ.ಮಾಡ್ಯಾಳ, ಸೋಮಲಿಂಗ ಎಸ್ ಗಂಜಿ ಮೊದಲಾದವರು ವೇದಿಕೆಯಲ್ಲಿದ್ದರು.

## ಗಮನ ಸೆಳೆದ ಕತೆಗಾರರೊಂದಿಗೆ ಸಂವಾದ

ಕತೆಗಳ ವಸ್ತು, ರಚನೆಯ ಹಿನ್ನಲೆ, ಭಾಷೆಶೈಲಿಯ ಕುರಿತಾಗಿ ವಿದ್ಯಾರ್ಥಿಗಳು ಕತೆಗಾರರೊಂದಿಗೆ ಸಂವಾದ ಮಾಡಿದರು.

ಕಾಲೇಜಿನ ಆಯ್ದ 50 ವಿದ್ಯಾರ್ಥಿಗಳು ಕತೆಗಾರ ಡಾ. ಪ್ರಕಾಶ ಗ.ಖಾಡೆ ಅವರೊಂದಿಗೆ ನಡೆದ ಸಂವಾದ ಕಥಾಲೋಕದ ಹೊಸ ವಿಷಯಗಳನ್ನು ಕಲಿಯಲು ಪ್ರೇರಣೆ ನೀಡಿತು ಎಂದು ವಿದ್ಯಾರ್ಥಿನಿ ಐಶ್ವರ್ಯ ನಾದ ಹೇಳಿದರು.

ಕತೆ ಕಟ್ಟುವ ವಿಧಾನ, ಭಾಷಾ ಶೈಲಿ ಇತ್ಯಾದಿ ವಿಷಯಗಳನ್ನು ಕುಮಾರಿ ಸ್ನೇಹಾ, ಕು.ಬಸವರಾಜ ಪೂಜಾರಿ ಮೊದಲಾದ ವಿದ್ಯಾರ್ಥಿಗಳು ಕಥೆಗಾರರೊಂದಿಗೆ ಸಂವಾದ ನಡೆಸಿದರು.

# ಡಿ.17ರಂದು ಡಾ.ವಿಷ್ಣುವರ್ಧನ್ ಅಭಿಮಾನಿಗಳಿಂದ ಪ್ರತಿಭಟನೆ

ಉದಯರಶ್ಮಿ ನ್ಯೂಸ್



ವಿಜಯಪುರ: ನಾಡಿನ ಮೇರು ಕಲಾವಿದ ಡಾಕ್ಟರ್ ವಿಷ್ಣುವರ್ಧನ್ ಅವರ ಪುಣ್ಯಭೂಮಿ ನಿರ್ಮಾಣ ಮಾಡುವ ಬಗ್ಗೆ ಇದೇ ಡಿಸೆಂಬರ್ 17ರಂದು ಬೆಂಗಳೂರಿನಲ್ಲಿ ಹೋರಾಟ ಮತ್ತು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ವಿಜಯಪುರ ಜಿಲ್ಲಾ ಘಟಕದ ವತಿಯಿಂದ ವಿಷ್ಣು ಸಂಗಮೇಶ ತಿಳಿಸಿದ್ದಾರೆ.

ಶನಿವಾರ ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಕನ್ನಡ ಚಿತ್ರರಂಗ ಕಂಡ ಮೇರು ನಟ ಡಾ. ವಿಷ್ಣುವರ್ಧನ್ 30 12 2009ರಂದು ಇಹಲೋಕ ತ್ಯಜಿಸಿ 14 ವರ್ಷ ಕಳೆದರೂ ಇದುವರೆಗೂ ಪುಣ್ಯಭೂಮಿ ನಿರ್ಮಾಣ ಕಾರ್ಯ ನೆರವೇರಿಲ್ಲ. ಕೋಟ್ಯಾಂತರ ಅಭಿಮಾನಿಗಳು ಪಡೆದ ಕೋಟಿಗೊಬ್ಬ ಯಜಮಾನ್ರ ಅಂತ್ಯಕ್ರಿಯೆ ನಡೆದ ಸ್ಥಳದಲ್ಲಿ ಪುಣ್ಯಭೂಮಿ ನಿರ್ಮಿಸಲು ಭೂಮಿ ನೀಡುವಲ್ಲಿ ಸರ್ಕಾರಗಳು ಇಂದಿಗೂ ಅಂತಿಮ ನಿರ್ಧಾರ ತೆಗೆದುಕೊಳ್ಳುವಲ್ಲಿ ವಿಫಲವಾಗಿರುವುದು ಬೇಸರದ ಸಂಗತಿ ಎಂದಿದ್ದಾರೆ.

ಡಾಕ್ಟರ್ ವಿಷ್ಣು ಸೇನಾ ಸಮಿತಿ ಅಧ್ಯಕ್ಷ ವೀರಕಪುತ್ರ ಶ್ರೀನಿವಾಸ್ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾದ ಪುಣ್ಯಭೂಮಿ ಸ್ಥಾಪನೆಗೆ ಸರಕಾರಕ್ಕೆ ಅಂತಿಮ ಎಚ್ಚರಿಕೆ ನೀಡಲು ಮತ್ತು ಕಾನೂನು ಪ್ರಕ್ರಿಯೆ ಹೋರಾಟಕ್ಕೆ ನಾಡಿನ ಎಲ್ಲ ಕನ್ನಡಪರ ಹೋರಾಟಗಾರರು, ರೈತ ಪರ ಹೋರಾಟಗಾರರು ಭಾಗವಹಿಸಬೇಕೆಂದು ವಿಷ್ಣು ಸಂಗಮೇಶ ಪ್ರಕಟಣೆಯಲ್ಲಿ ತಿಳಿಸಿ ಬೆಂಬಲ ಕೋರಿದ್ದಾರೆ.

# ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಸಂಪನ್ನ



ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಕಲ್ಬುರ್ಗಿ ಜಿಲ್ಲೆ ಚಿತ್ತಾಪೂರ ತಾಲೂಕಿನ ಹಲಕರ್ಟಿ ಗ್ರಾಮದ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಲಕ್ಷಾಂತರ ಭಕ್ತರ ಮಧ್ಯೆ ಅದ್ದೂರಿಯಾಗಿ ಜರುಗಿತು.

ಡಿ1 ರಂದು ರಾತ್ರಿ ಅಗ್ನಿ ಪ್ರವೇಶ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಮಧ್ಯರಾತ್ರ 2ಗಂಟೆಗೆ ಪ್ರಾರಂಭವಾಗಿ ಮೊದಲು ಪುರವಂತರರು ಅಗ್ನಿಪ್ರವೇಶಿಸಿದರು. ಬೆಳಗಿನ ಜಾವ 5ಗಂಟೆಯವರೆಗೆ ಯಾವುದೇ ತೊಂದರೆಯಿಲ್ಲದೇ ನೆರವೇರಿತು. ಸಂಜೆ 7 ಗಂಟೆಗೆ ರಥೋತ್ಸವ ಜರುಗಿತು. ಭಕ್ತರು ಚಲಿಸುವ ರಥಕ್ಕೆ ಉತ್ತತ್ತಿ ಮತ್ತು ಬಾಳೆಹಣ್ಣು ಎಸೆದು ಭಕ್ತಿಯನ್ನು ಪ್ರದರ್ಶಿಸಿದರು.

ಅದಕ್ಕೂ ಮೊದಲು ನಡೆದ ಮದ್ದು ಸುಡುವ ಕಾರ್ಯಕ್ರಮ ಬಾನಂಗಳದ ಸೌಂದರ್ಯವನ್ನು ಇಮ್ಮಡಿಗೊಳಿತ್ತು.

# ಅಬ್ಯಾಕ್ಸ್ ಸ್ಪರ್ಧೆ: ಅಮೋಘಸಾಯಿ ಕೋರಿ ಚಾಂಪಿಯನ್

ಉದಯರಶ್ಮಿ ನ್ಯೂಸ್




ವಿಜಯಪುರ: ಇತ್ತೀಚೆಗೆ ದುಬೈನಲ್ಲಿ ನಡೆದ ಅಂತಾರಾಷ್ಟ್ರೀಯ ಬ್ರೇನ್ ಓ ಬ್ರೇನ್ ಅಬ್ಯಾಕ್ಸ್ ಸ್ಪರ್ಧೆಯಲ್ಲಿ ವಿಜಯಪುರದ ಅಮೋಘಸಾಯಿ ಬಾಬು ಕೋರಿ ಅವರು ಭಾಗವಹಿಸಿ ಚಾಂಪಿಯನ್ ಆಗಿ ಹೊರಹೊಮ್ಮುವ ಮೂಲಕ ಅಮೋಘ ಸಾಧನೆ ಮಾಡಿದ್ದಾರೆ.

ಎಆರ್‌ಜೆ ಅಂತಾರಾಷ್ಟ್ರೀಯ ಪಬ್ಲಿಕ್ ಶಾಲೆಯಲ್ಲಿ ಓದುತ್ತಿರುವ ಅಮೋಘಸಾಯಿ ಈ ವಿಶಿಷ್ಟ ಸಾಧನೆ ಮಾಡಿದ್ದಾರೆ ಎಂದು ವಿಜಯ ಜೋಶಿ ತಿಳಿಸಿದ್ದಾರೆ.

# ಅನಸೂಯಾ ಹೆಗಡೆ ಬೀಳ್ಕೊಡುಗೆ ಸಮಾರಂಭ

ಉದಯರಶ್ಮಿ ನ್ಯೂಸ್



ತಿಕೋಟಾ: ತಾಲ್ಲೂಕಿನ ಹೊನವಾಡ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಿರಿಯ ಸುರಕ್ಷತಾ ಅಧಿಕಾರಿ ಶ್ರೀಮತಿ ಅನಸೂಯಾ ಹೆಗಡೆ ಅವರ ಬೀಳ್ಕೊಡುಗೆ ಸಮಾರಂಭ ಜರುಗಿತು.

ಪ್ರಾಥಮಿಕ ಆಡಳಿತ ವೈದ್ಯಾಧಿಕಾರಿ ಡಾ. ಎಸ್ ಜಿ ಕಿಣಗಿ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಆರೋಗ್ಯ ಇಲಾಖೆಯಲ್ಲಿ ಉತ್ತಮ ಕಾರ್ಯ ನಿರ್ವಹಿಸಿಕೊಂಡು ಬಂದಂತಹ ಸುರಕ್ಷತಾ ಅಧಿಕಾರಿ ತಮ್ಮ ಒಳ್ಳೆಯ ಒಡನಾಟದಿಂದ ಆರೋಗ್ಯ ಕೇಂದ್ರಕ್ಕೆ ಬರುವಂತಹ ರೋಗಿಯ ಜೊತೆಗೆ ಹಾಗೆ ಸಿಬ್ಬಂದಿ ಜೊತೆಗೆ ಅಚ್ಚು ಮೆಚ್ಚಿನ ಸೇವೆ ಸಲ್ಲಿಸಿದ್ದರು. ಇಂತಹ ಅಧಿಕಾರಿಗಳು ಸಿಗುವುದು ಅಪರೂಪ ಎಂದು ಶ್ಲಾಘಿಸಿದರು.

ವೇದಿಕೆ ಮೇಲೆ ವೈದ್ಯಾಧಿಕಾರಿಗಳಾದ ಡಾ. ಶ್ವೇತಾ ಇಂಗಳೇಶ್ವರ್,

ಪ್ರಾಥಮಿಕ ಆರೋಗ್ಯ ನಿರೀಕ್ಷಣಾಧಿಕಾರಿ ಜಕ್ಕನಗೌಡ, ಗ್ರಾಪಂ ಸದಸ್ಯ ಅರವಿಂದ ಮಾಲಗಾರ ಮಾತನಾಡಿದರು.

ನಿರೂಪಣೆ ಸಿ ಎ ಜೋಶಿ ಮಾಡಿದರು.


ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ತುಕಾರಾಮ ದಡಕೆ, ಉಪಾಧ್ಯಕ್ಷ, ಸದಸ್ಯರು, ಪ್ರಾಥಮಿಕ ಆರೋಗ್ಯ ಕೇಂದ್ರದ ಎಲ್ಲ ಅಧಿಕಾರಿಗಳು, ಸಿಬ್ಬಂದಿ ಇದ್ದರು.

# ಬಲವೋ, ಬುದ್ದಿಯೋ?



ಉದಯರಶ್ಮಿ ನ್ಯೂಸ್

ಬಲ ಹೆಚ್ಚೋ, ಬುದ್ಧಿ ಹೆಚ್ಚೋ ಎಂಬ ವಿಷಯದಲ್ಲಿ ಒಮ್ಮೆ ಸಿಂಹಕ್ಕೂ ನರಿಗೂ ತುಂಬ ಚರ್ಚೆ ನಡೆಯಿತು. ಬಲಕ್ಕಿಂತ ಬುದ್ಧಿಯೇ ಹೆಚ್ಚು ಎಂದು ನರಿ ವಾದಿಸಿತು. ಅಷ್ಟೇ ಅಲ್ಲ, ತನ್ನ



ವಿದ್ಯಾರ್ಥಿನಿಧಿ

– ಮಂಡ್ಯ.ಮ.ನಾ.ಉಡುಪ

ಆ ಹೇಳಿಕೆಯನ್ನು ಸಮರ್ಥಿಸಿ ತೋರಿಸಲೂ ಅದು ಸಿದ್ಧವಿತ್ತು. ನರಿಯ ಮಾತಿನ ಸರಣಿ ಸಿಂಹಕ್ಕೆ ಹಿಡಿಸಿತು. ನರಿಯ ಹೇಳಿಕೆ ನಿಜವಿರಲೂಬಹುದೆಂದು ಅದಕ್ಕೆ ಅನ್ನಿಸತೊಡಗಿತು.

ಹೀಗಿರುತ್ತ ಒಮ್ಮೆ ಅವು ಬೇಟೆಗೆಂದು ಹೊರಟವು.

ನರಿ ತನ್ನ ಹೇಳಿಕೆಯ ಸಮರ್ಥನೆಗಾಗಿ ಒಂದು ಯೋಜನೆ ಹಾಕಿತು. ಸಿಂಹ ಸತ್ತು ಬಿದ್ದಂತೆ ನಟಿಸಬೇಕು. ಇತರ ಪ್ರಾಣಿಗಳು ಸಮೀಪಿಸಿದಾಗ ಧುತ್ತೆಂದು ಎದ್ದು ನಿಂತು ಅವುಗಳ ಮೇಲೆ ಆಕ್ರಮಣ ನಡೆಸಬೇಕು, ಇದು ನರಿಯಯೋಜನೆ.

ಸರಿ, ಸಿಂಹ ಸತ್ತಂತೆ ಬಿದ್ದುಕೊಂಡಿತು. ನರಿ ಪಕ್ಕದ

ಪೊದೆಯಲ್ಲಿ ಅಡಗಿಕೊಂಡಿದ್ದು ಸಿಂಹಕ್ಕೆ ಸೂಚನೆಗಳನ್ನು ಕೊಡುತ್ತಿತ್ತು. ಅಷ್ಟರಲ್ಲಿ ಆನೆಗಳ ಒಂದು ಹಿಂಡು ಧಾವಿಸುತ್ತ ಬರುವುದು ಕಾಣಿಸಿತು. ಸಿಂಹ ಸಹಜವಾಗಿ ಇಂಥ ಸಂದರ್ಭದಲ್ಲಿ ಎದ್ದು ನಿಲ್ಲಬೇಕು. ಆದರೆ ನರಿ ಅದಕ್ಕೆ ಏಳಬೇಡವೆಂದು ಸೂಚಿಸಿತು. ಆನೆಗಳ ಹಿಂಡು ತೀರ ಹತ್ತಿರ ಬರಲಿ, ಆಗ ಮಿಂಚಿನಂತೆ ಅವುಗಳ ಮೇಲೆ ಎರಗಿದರೆ ಆಯಿತು. ನೀನೀಗ ಏನೂ ಚಿಂತಿಸದೆ ಹಾಗೇ ಬಿದ್ದು

ಕೊಂಡಿರು,” ಎಂದಿತು ನರಿ. ಸಿಂಹಕ್ಕೆ ಉಪಾಯವಿಲ್ಲ. ಬುದ್ಧಿಯ ಹಿರಿಮೆಯನ್ನು ಬಲದೊಂದಿಗೆ ಹೋಲಿಸುವ ಸ್ಪರ್ಧೆ ನಡೆಯುತ್ತದೆ ತಾನೇ? ಇಷ್ಟು ಹೊತ್ತಿಗೆ ಆನೆಗಳ ಹಿಂಡು ಮುಂದು ಮುಂದಕ್ಕೆ ನುಗ್ಗಿ ಬಂತು. ಅದನ್ನು ನೋಡಿದ ನರಿ ಕಾಲಿಗೆ ಬುದ್ಧಿ ಹೇಳಿತು. ಪಾಪ! ಸಿಂಹ ಏಳಬೇಕೆನ್ನುವಷ್ಟರಲ್ಲಿ ಧಾವಿಸಿ ಬಂದ ಆನೆಗಳು ಅದನ್ನು ಕಚಪಚ ತುಳಿದುಹಾಕಿದುವು.

ಬೆಣ್ಣೆ ತೂಗುವವ ಸುಣ್ಣ ತೂಗುವವನ ಅಭಿಪ್ರಾಯವನ್ನು ನಂಬಿ ಕೂಡಬಾರದು, ಅಲ್ಲವೆ ?

### ತನು ಫೌಂಡೇಶನ್‌ವತಿಯಿಂದ ಕನ್ನಡ ರಾಜ್ಯೋತ್ಸವ । ಸಾಧಕರಿಗೆ 'ತನು ಕನ್ನಡ-ಮನ ಕನ್ನಡ ರಾಜ್ಯ ಪ್ರಶಸ್ತಿ' ಪ್ರದಾನ

# ಅನ್ಯಭಾಷಿಕರಿಗೆ ಕನ್ನಡ ಕಲಿಸುವ ಪರಿಪಾಠ ಬೆಳೆಯಲಿ :ಮೆಳ್ಳೆಗಟ್ಟೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಾವು ನವ್ಹೆಂಬರ್ ಕನ್ನಡಿಗರಾಗಬಾರದು, ನಿರಂತರ ಕನ್ನಡಿಗರಾಗಬೇಕು. ಕನ್ನಡವನ್ನು ನಾವೆಲ್ಲಾ ಮಾತನಾಡುತ್ತಾ,



ಆಡಳಿತದಲ್ಲಿ ಅಳವಡಿಸಿಕೊಳ್ಳುವುದರ ಮೂಲಕ ಇಂದು ನಾವು ಕನ್ನಡವನ್ನು ಉಳಿಸಬೇಕಾಗಿದೆ ಎಂದು ಕಮಾಂಡೆಂಟ್ ಐಆರ್‌ಬಿ ಮುಖ್ಯಸ್ಥ ಎನ್.ಬಿ.ಮೆಳ್ಳೆಗಟ್ಟೆ ಹೇಳಿದರು.

ನಗರದ ಶ್ರೀ ಕಂದಗಲ್ಲ ಹಣಮಂತರಾಯ ರಂಗಮಂದಿರದಲ್ಲಿ ನಡೆದ ತನು ಫೌಂಡೇಶನ್ ವಿಜಯಪುರದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ, ಕನ್ನಡ ರಾಜ್ಯೋತ್ಸವದ ಪ್ರಯುಕ್ತ 'ಕನ್ನಡ ಸಿರಿಗನ್ನಡ' ಕಾರ್ಯಕ್ರಮ ಹಾಗೂ 'ತನು ಕನ್ನಡ ಮನ ಕನ್ನಡ' ರಾಜ್ಯ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡಕ್ಕಿರುವ ಶ್ರೀಮಂತಿಕೆ, ಅದರ ಸಂಸ್ಕೃತಿಗಿರುವ ತಾಕತ್ತು ಶಾಶ್ವತವಾಗಿದೆ. ಇಂಗ್ಲೀಷ್ ನ ವ್ಯಾಮೋಹ ಬಿಟ್ಟು ಕನ್ನಡಕ್ಕೆ ಆದ್ಯತೆ ಕೊಡಬೇಕು. ವ್ಯವಹಾರಕ್ಕಾಗಿ ಮಾತ್ರ ಬೇರೆ ಭಾಷೆ ಇರಲಿ, ಮನಸ್ಪೂರ್ವಕವಾಗಿ ಕನ್ನಡ ಮಾತ್ರ ಇರಲಿ ಎಂದು ತಿಳಿಸಿದರು.

ಅನ್ಯಭಾಷಿಕರಿಗೆ ನಮ್ಮ ಕನ್ನಡ ಕಲಿಸುವ ಪರಿಪಾಠ ಆಗಬೇಕಿದೆ. ಕರ್ನಾಟಕದ ಏಕೀಕರಣದ ಮಹತ್ವವನ್ನು ನಾವು ಇಂದು ಅರಿಯುವುದು ಮಹತ್ವದ್ದಾಗಿದೆ. ಸಾಹಿತಿಗಳ ಬರಹಗಳನ್ನು ಇಂದಿನ ಯುವಕರು ಓದಬೇಕಿದೆ, ಅಂದಾಗ ಮಾತ್ರ ನಮ್ಮ ಮುಂದಿನ ಪೀಳಿಗೆಗೆ ಕನ್ನಡ ಶ್ರೀಮಂತಿಕೆ, ಕನ್ನಡದ ಸೊಬಗನ್ನು ಉಳಿಸಿದಂತಾಗುತ್ತದೆ ಎಂದರು.

ತನು ಫೌಂಡೇಶನ್ ಕಾರ್ಯದರ್ಶಿ ಮಂಜುನಾಥ ಜುನಗೊಂಡ ಅವರು ಪ್ರಾಸ್ತಾವಿಕ ಮಾತನಾಡಿ, ಫೌಂಡೇಶನ್ ನಡೆದು ಬಂದ ಹಾದಿ, ಕನ್ನಡಕ್ಕಾಗಿ ನಿರಂತರವಾಗಿ ಸಲ್ಲಿಸುತ್ತಿರುವ ಸೇವೆಯ ಕುರಿತಾಗಿ ವಿವರಿಸಿದರು. ಅಲ್ಲದೇ ಕನ್ನಡ ಕಲೆ, ಸಾಹಿತ್ಯ, ಸಂಸ್ಕೃತಿಯ ಉಳಿವಿಗಾಗಿ ಶ್ರಮಿಸುತ್ತಿರುವ ಸೇವಕರನ್ನು ಗುರುತಿಸಿ ಪ್ರಶಸ್ತಿ ನೀಡುವ ಮೂಲಕ ಗೌರವ ಸಲ್ಲಿಸುತ್ತಿರುವುದರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಇನ್ನೋರ್ವ ಅತಿಥಿ ದೇವರಹಿಪ್ಪರಗಿಯ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕಬೂಲ್ ಕೊಕಟನೂರ ಮಾತನಾಡಿ, ಜಿಲ್ಲೆ ಸೇರಿದಂತೆ ನಾಡಿನ ವಿವಿಧ ಸಾಧಕರನ್ನು ಗುರುತಿಸಿ ಕನ್ನಡ ಉಳಿಸುವ ಮನಸ್ಸುಗಳಿಗೆ ಪ್ರೋತ್ಸಾಹಿಸುತ್ತಿರುವ ತನು ಫೌಂಡೇಶನ್ ನ ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ವಿವಿಧ ಕ್ಷೇತ್ರದಲ್ಲಿ ಸಾಧನೆಗೈದಂತಹ ಸಾಧಕರಾದ ಹೆಲೆನ್ ಮೈಸೂರು, ಪುಷ್ಪಾ ಹಿರೇಮಠ, ಡಾ. ಪ್ರವೀಣ ಬಗಲಿ, ವೀರೇಶ ವಾಲಿ, ವಿಜಯಕುಮಾರ ಮಮದಾಪುರ, ಡಾ. ಸುರೇಶ ಲೋಣಿ, ಮಹಾಂತೇಶ ಮಾಹೂರ, ನಾಶಿ ದಂಪತಿಗಳು, ಸಿದ್ದಣ್ಣ ವಿಜಾಪೂರ, ಸಿದ್ರಾಮ ಅಗಸರ, ಅಮಾತೆಪ್ಪ ಪೂಜಾರಿ, ವಿಎಸ್‌ಜಿ ಗ್ರೂಪ್ ಅವರಿಗೆ ತನು ಕನ್ನಡ ಮನ ಕನ್ನಡ ರಾಜ್ಯ ಪ್ರಶಸ್ತಿಯನ್ನು ನೀಡಿ ಪುರಸ್ಕರಿಸಲಾಯಿತು.

ಇದೇ ವೇಳೆ ಅನಿತಾ ಕೆ.ಆರ್ ಪೇಟೆ, ಗಿರೀಶ ಇಟ್ಟಂಗಿ, ಸೋಮನಾಥ ವಾಲಿಕಾರ, ಪ್ರೇಮ ಚಲವಾದಿ, ಧನಲಕ್ಷ್ಮೀ ದೊಡಮನಿ, ಸುರೇಶ ಜತ್ತಿ, ಸಂಗನಬಸವರಾಜ ಗೂಡ್ಲುಮನಿ ಅವರಿಗೆ ವಿಶೇಷವಾಗಿ ಸನ್ಮಾನಿಸಿ ಪ್ರೋತ್ಸಾಹಿಸಲಾಯಿತು.



ಪ್ರಶಸ್ತಿ ಸ್ವೀಕರಿಸಿದ ರಂಗಭೂಮಿ ಕಲಾವಿದೆ ಹೆಲೆನ್ ಮೈಸೂರು ಅವರು ಮಾತನಾಡಿ, ಕನ್ನಡವನ್ನು ಉಳಿಸುವ ಕಾರ್ಯಗಳ ಬಗ್ಗೆ, ಕನ್ನಡದ ಅಭಿಮಾನವನ್ನು ನಾವೆಲ್ಲರೂ ಬೆಳೆಸಿಕೊಳ್ಳಬೇಕು. ಈ ತನು ಕನ್ನಡ ಮನ ಕನ್ನಡದಂತಹ ಕಾರ್ಯಕ್ರಮಗಳು ನಾಡಿಗೆ ಬೆಳಕಾಗಲಿ, ಕನ್ನಡ ಮನಸ್ಸುಗಳನ್ನು ಬಲಗೊಳಿಸುವ ಕಾರ್ಯ ನಿರಂತರವಾಗಿ ಜರುಗಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಮಾಜ ಸೇವಕಿ ವಿಜಯಲಕ್ಷ್ಮೀ ಬಾಳಿ ಅಧ್ಯಕ್ಷೀಯ ಮಾತುಗಳನ್ನಾಡಿದರು.

ವೇದಿಕೆಯಲ್ಲಿ ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕ್ ನಿಯಮಿತದ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ, ಚೇತನಾ ಕಾಲೇಜಿನ ಮುಖ್ಯಸ್ಥೆ ರಾಜೇಶ್ವರಿ ಜುಗತಿ, ದರಬಾರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಜಿ.ಹೆಚ್. ಮಣ್ಣೂರ, ವೈದ್ಯರಾದ ಡಾ. ಸನ್ಮತಿ ಕುರುಂದವಾಡೆ, ಚೇತನಾ ಶಾಲೆಯ ಚೇರಮನ್ ಪ್ರತಿಭಾ ಪಾಟೀಲ್ ತನು ಫೌಂಡೇಶನ್ ಅಧ್ಯಕ್ಷರಾದ ವಿಜುಗೌಡ ಕಾಳಶೆಟ್ಟಿ ಸೇರಿದಂತೆ ಇನ್ನಿತರ ಮುಖಂಡರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಪ್ರಾಥ-ರ್ನನೆಯನ್ನು ರವಿ ಬರಾಡೆ ತಂಡದವರು, ಸ್ವಾಗತವನ್ನು ಸಂಗನಬಸವರಾಜ ಗೂಡ್ಲುಮನಿ ನೆರವೇರಿಸಿದರು. ಫೌಂಡೇಶನ್‌ನ ಕಾರ್ಯದರ್ಶಿ ಮಂಜುನಾಥ ಜುನಗೊಂಡ ನಿರೂಪಿಸಿ, ವಂದಿಸಿದರು.

ನಗರದ ಪ್ರತಿಷ್ಠಿತ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸಮಾರಂಭದಲ್ಲಿ ವಿವಿಧ ಶಾಲಾ ಮಕ್ಕಳಿಂದ ಕನ್ನಡದ ಹಾಡುಗಳ ನೃತ್ಯ ಪ್ರದರ್ಶನಗಳು ಹಾಗೂ ವಿವಿಧ ಗಾಯಕರುಗಳು ಕನ್ನಡ ಹಾಡುಗಳನ್ನು ಹಾಡುವ ಮೂಲಕ ಗಮನ ಸೆಳೆದರು.

# ಕನಕದಾಸರ ಸಂದೇಶ ಸಾರ್ವಕಾಲಿಕ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಭಕ್ತ ಕನಕದಾಸರ ಜಯಂತಿಯನ್ನು ಗುರುವಾರ ಆಚರಿಸಲಾಯಿತು.

ಜಯಂತಿಯಂಗವಾಗಿ ಭಕ್ತ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ನಂತರ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಮಾತನಾಡಿದ ಅವರು, ಕನಕದಾಸರು ಇಡೀ ಮಾನವಕುಲಕ್ಕೆ ಸಾಮರಸ್ಯದ ಬೋಧನೆ ಮಾಡಿದ್ದಾರೆ. ಇವರ ಸಂದೇಶಗಳು ಸರ್ವಕಾಲಿಕ ಪ್ರಸ್ತುತವಾಗಿವೆ ಎಂದರು.

ಪೂಜಾ ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ರವೀಂದ್ರಗೌಡ ಕೆ., ನ್ಯಾಕ ಸಂಯೋಜಕ ಪ್ರೊ.ಸಿ.ಪಿ.ಧಡೇಕರ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ವೈ.ಬಿ.ನಾಯಕ, ವಿದ್ಯಾರ್ಥಿ ಒಕ್ಕೂಟದ ಮುಖ್ಯಸ್ಥ ಪ್ರೊ.ಡಿ. ಎಸ್.ಲಗಳಿ, ಐಕ್ಯೂಎಸಿ ಸಂಂ-ಯೋಜಕ ಪ್ರೊ.ದಿಲೀಪಕುಮಾರ, ಡಾ.ಎಸ್.ಬಿ.ಜನಗೊಂಡ, ಎಂ.ಕೆ. ಯಾಧವ, ಪಿ.ಎಸ್.ಹೊರಕೇರಿ, ಎಂ.ಆರ್.ಮಮದಾಪೂರ, ಎಸ್.ಡಿ.ಹಣಮರೆಡ್ಡಿ, ಜೆ.ಎಸ್. ಡಾವಣಗೇರಿ ಎಸ್.ಜೆ.ಸೂರ್ಯವಂಶಿ ಇತರರು ಭಾಗವಹಿಸಿದ್ದರು.

# ಮಹಾತ್ಮರ ಚರಿತ್ರೆ ಆಲಿಸುವುದರಿಂದ ಜೀವನ ಪಾವನ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪುರಾಣ ಎಂಬುದು ಪುಂಡರಗೋಷ್ಠಿಯಲ್ಲ, ಪುರಾಣ ಎಂದರೆ ಆಧ್ಯಾತ್ಮ ಶರಣರ ಬದುಕಿನ ಅರ್ಥ ತಿಳಿದುಕೊಂಡು ಅವರ ಹಾದಿಯಲ್ಲಿ ಸಾಗುವ ನಡೆ ಕಲಿಸುವ ಧರ್ಮದ ಪಾಠಶಾಲೆ ಇದಂತೆ ಅದಕ್ಕೆ ಶರಣರ ಸಂತರ ಸತ್ಪುರುಷರ ದಾರ್ಶನಿಕರ ಮಹಾತ್ಮರ ಚರಿತ್ರೆ ಆಲಿಸುವುದರಿಂದ ಜೀವನ ಪಾವನವಾಗುವುದು ಎಂದು ಪಂಚಮಸಾಲಿ ಸಮಾಜದ ತಾಲೂಕು ಅಧ್ಯಕ್ಷ ಎಂ.ಎಂ.ಹಂಗರಗಿ ಹೇಳಿದರು.



ತಾಲೂಕಿನ ಮೋರಟಗಿ ಗ್ರಾಮದಲ್ಲಿ ಸಿದ್ದರಾಮೇಶ್ವರ ಜಾತ್ರಾ ನಿಮಿತ್ಯ 14 ದಿನಗಳ ಪರ್ಯಂತ ಹಮ್ಮಿಕೊಂಡ ಜಗದ್ಗುರು ರೇವಣಸಿದ್ದೇಶ್ವರ ಹಾಗೂ ಸೊನ್ನಲಗಿ ಶಿವಯೋಗಿ ಸಿದ್ಧರಾಮೇಶ್ವರ ಪುರಾಣ ಮಂಗಲ ಹಾಗೂ ಧರ್ಮಸಭೆಯಲ್ಲಿ ಮಾತನಾಡಿ, ಅವಿಭಕ್ತ ಕುಟುಂಬಗಳು ಮರೆಯಾಗಿ ಚಿಕ್ಕ ಚಿಕ್ಕ ಸಂಸಾರಗಳು ಉದ್ಭವಾಗುತ್ತೀರುವುದು ಸಂಬಂಧಗಳ ಬೆಲೆ ತಿಳಿಸಿ ರಕ್ತ ಸಂಬಂಧಗಳ ಅರ್ಥ ಭೋದಿಸುವ ಪಾವನ ಸ್ಥಳಗಳು ಧರ್ಮದ ದೇವಾಲಯಗಳು ಅತ್ತೆ ಮಾವ ಮೈದುನ ಸಹೋದರ ಸಹೋದರಿ ಪತಿ ಪತ್ನಿಯರ ಅಂತರಂಗದ ತೋಳಲಾಟ ಹೋಗಲಾಡಿಸುವ ದಿವ್ಯ ಶಕ್ತಿ ಶರಣರ ಜೀವನ ಚರಿತ್ರೆಯಲ್ಲಿ ಇರುವುದು ಇಂತಹ ಅದ್ಭುತ ಶಕ್ತಿ ಶರಣರ ಜೀವನ ಚರಿತ್ರೆಯಲ್ಲಿ ಇದೆ. ಧರ್ಮದ ರಕ್ಷಣ ಹಿರಿಯರ ಸಂಪ್ರದಾಯ ನಮ್ಮ ಭಾರತೀಯ ಪರಂಪರೆ ಉಳಿಯಬೇಕಾದರೆ ಧರ್ಮದಿಂದ ನಡೆದು ಬದುಕಿನ ಮಹತ್ವ ಸಾರಿದ ಶರಣರ ಆದರ್ಶದ ಬದುಕು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಅದು ಸಾರ್ಥಕ ಬದುಕು ಆಗುವುದು. ಹುಟ್ಟು ಸಾವಿನ ಮಧ್ಯ ಸಾಧಕರಾಗಲು ಶರಣರು ಕಾಯಕ ಮಾಡುತ್ತ ಧರ್ಮ ಹಿಡಿದು ಅಧರ್ಮ ಹೋಗಲಾಡಿಸುವ ವಚನ ಸಾಹಿತ್ಯದ ಮೂಲಕ ಜನ ಜಾಗೃತಿ ಮೂಡಿಸಿ ಮಹಾತ್ಮ ಚರಿತ್ರೆ ಅರಿಯಬೇಕು ಎಂದರು.

ಜಗದ್ಗುರು ರೇವಣಸಿದ್ದೇಶ್ವರ ಹಾಗೂ ಸೊನ್ನಲಗಿ ಶಿವಯೋಗಿ ಸಿದ್ಧರಾಮೇಶ್ವರ ಪುರಾಣ ಮಂಗಲ ಹಾಗೂ ಧರ್ಮಸಭೆಗೆ ಓಂ ಪ್ರಸಾದ ತಿವಾರಿ ಚಾಲನೆ ನೀಡಿದರು.

ಜೇರಟಗಿ ಶ್ರೀಮಠದ ಮಹಾಂತ ಶ್ರೀಗಳು ಸಾನಿಧ್ಯ ವಹಿಸಿದ್ದರು

ಪುರಾಣ ಪ್ರಚನಕಾರ ಹೂನಳ್ಳಿ ಗುರುಲಿಂಗಯ್ಯ ಸ್ವಾಮಿ, ನಿಂಗನಗೌಡ ಪಾಟೀಲ, ಚನ್ನಬಸಪ್ಪಗೌಡ ಪಾಟೀಲ, ಡಾ.ಆರ್.ಬಿ.ಕುಲಕರ್ಣಿ, ಶ್ರೀಶೈಲ ಕೋಣಶಿರಗಿ, ರೇವಣಸಿದ್ಧ ಮಸಳಿ, ತಾಪಂ ಮಾಜಿ ಸದಸ್ಯ ಪ್ರಕಾಶ ಅಡಗಲ್ಲ, ಅನೀಲಗೌಡ ಪಾಟೀಲ, ಮಲ್ಲಪ್ಪಗೌಡ ಕುಂಬಾರ, ಶರಣಗೌಡ ಮಾಲಿಪಾಟೀಲ, ಶಿವಗೊಂಡಪ್ಪ ಮಾಲಿಪಾಟೀಲ, ಪತ್ರಕರ್ತರ ಸಂಘದ ಅಧ್ಯಕ್ಷ ಪಂಡಿತ ಯಂಪೂರೆ, ಕಾಂಗ್ರೆಸ್ ಮುಖಂಡ ರಮೇಶ ನಡುವಿನಕೇರಿ, ಕುಪೇಂದ್ರ ಆಹೇರಿ ಭಾಗಣ್ಣ ವಾಲಿಕಾರ, ಆಕಾಶ ನಡುವಿನಕೇರಿ ಸೇರಿದಂತೆ ಹಲವರು ಇದ್ದರು.

ಪತ್ರಕರ್ತ ಈರಣ್ಣ ವಿಶ್ವಕರ್ಮ ಸ್ವಾಗತಿಸಿ ನಿರೂಪಿಸಿದರು. ಪತ್ರಕರ್ತ ವಿದ್ಯಾಧರ ಮಳಗಿ ವಂದಿಸಿದರು.

# ಅಧಿಕಾರ ಹೋದರೂ ಸಮಾಜದ ಕೆಲಸ ನಿರಂತರ :ಭೂಸನೂರ



**ಉದಯರಶ್ಮಿ ನ್ಯೂಸ್**

ಸಿಂದಗಿ: ಅಧಿಕಾರ ಬರುತ್ತೆ, ಹೋಗುತ್ತೆ. ಆದರೆ ನಿರಂತರವಾಗಿ ಸಮಾಜದ ಕೆಲಸ ಮಾಡಬೇಕು ಎಂದು ಮಾಜಿ ಶಾಸಕ ರಮೇಶ ಭೂಸನೂರ ಹೇಳಿದರು.

ತಾಲೂಕಿನ ಬಂದಾಳ ಗ್ರಾಮದ ಬನ್ನಿ ಮಂಟಪ ನಿರ್ಮಾಣ ಮಾಡಲು ತಮ್ಮ ಸ್ವಂತ ಖರ್ಚಿನಲ್ಲಿ ನಾಲ್ಕು ಲಕ್ಷ ರೂಪಾಯಿ ದೇಣಿಗೆ ನೀಡುವ ಮೂಲಕ ಅವರು ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿ, ದಾನ ಧರ್ಮ ಪರೋಪಕಾರಗಳು ಜೀವನದಲ್ಲಿ ಅಳವಡಿಸಿಕೊಂಡು ಗ್ರಾಮದ ಬನ್ನಿ ಮಂಟಪ ನವ ನಿರ್ಮಾಣ ಮಾಡುತ್ತಿರುವದು ಹೆಮ್ಮೆಯ ವಿಷಯವಾಗಿದೆ ಗ್ರಾಮದ ಸರ್ವ ಭಕ್ತರು ಬನ್ನಿ ಮಂಟಪ ನಿರ್ಮಾಣ ಮಾಡುವ ಕಾರ್ಯದಲ್ಲಿ ಭಾಗವಹಿಸಿ ಬನ್ನಿ ಮಂಟಪದ ಆರ್ ಸಿ ಗುಣಮಟ್ಟದಿಂದ ಕೂಡಿರಬೇಕು ಎಂದರು.

ಭೂಮಿ ಪೂಜೆಯಲ್ಲಿ ಗ್ರಾಮಸ್ಥರು ಭಾಗವಹಿಸಿದ್ದರು.

# ಆರೋಗ್ಯ ಜೀವನಕ್ಕೆ ನಗೆ ಸಂಜೀವಿನಿ :ಪ.ಗು.ಸಿದ್ದಾಪೂರ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಸಹಜ ನಗೆ ಆರೋಗ್ಯಕರವಾಗುವ ಜೊತೆಗೆ ಮನಸ್ಸಿನ ಒತ್ತಡ ಕಡಿಮೆ ಮಾಡುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸಹಜ ನಗೆಯನ್ನು ರೂಢಿ ಮಾಡಿಕೊಳ್ಳುವುದು ಉತ್ತಮ ಎಂದು ಕರ್ನಾಟಕ ರಾಜ್ಯೋತ್ಸವ ಪುರಸ್ಕೃತ ಮಕ್ಕಳ ಸಾಹಿತಿ ಪ.ಗು.ಸಿದ್ದಾಪೂರ ಹೇಳಿದರು.

ಪಟ್ಟಣದ ಬಸವ ಭವನದಲ್ಲಿ ಕರ್ನಾಟಕ ರಾಜ್ಯ ನಗೆಯೋಗ ಕೂಟಗಳ ಒಕ್ಕೂಟ ಹಾಗೂ ಸ್ಥಳೀಯ ಬಸವೇಶ್ವರ ನಗೆಯೋಗ ಕೂಟದ ಸಹಯೋಗದಲ್ಲಿ ಎರಡು ದಿನಗಳ ಕಾಲ ಹಮ್ಮಿಕೊಂಡಿರುವ ರಾಜ್ಯ ಮಟ್ಟದ 20 ನೇ ನಗೆ ಸಮ್ಮೇಳನದಲ್ಲಿ ಸನ್ಮಾನ ಸ್ವೀಕರಿಸಿದ ನಂತರ ಮಾತನಾಡಿದ ಅವರು, ಹೃದಯದಿಂದ ಬರುವುದೇ ನಿಜವಾದ ನಗೆ. ನಗೆಯಲ್ಲಿ ವ್ಯಂಗ್ಯ ನಗೆ, ಕುಹಕ ನಗೆ, ಅಪಹಾಸ್ಯ ನಗೆ ಉಂಟು. ಇವು ಇನ್ನೊಬ್ಬರಿಗೆ ನೋವು ಉಂಟು ಮಾಡುತ್ತವೆ. ಇಂತಹ ನಗೆ ಯಾರೂ ರೂಢಿಸಿಕೊಳ್ಳದೇ ಆರೋಗ್ಯಕರವಾದ ಸಹಜ ನಗೆ ರೂಢಿಸಿಕೊಂಡರೆ ಆರೋಗ್ಯದಿಂದ ಇರಲು ಸಾಧ್ಯ. ರಾಜರ ಕಾಲದಲ್ಲಿ ಕಲಾವಿದರೊಂದಿಗೆ ಹಾಸ್ಯ ಕಲಾವಿದ-ರಿಗೂ ರಾಜಾಶ್ರಯ ನೀಡುತ್ತಿದ್ದರು ಎಂದ ಅವರು, ನಗೆಯಲ್ಲಿ ಹೊಗೆ



ನಾಟಕ, ಸಿನಿಮಾಗಳಲ್ಲಿಯೂ ಹಾಸ್ಯ ಸನ್ನಿವೇಶ ಇರದೇ ಹೋದರೆ ಅದು ಯಶಸ್ವಿಯಾಗುವುದಿಲ್ಲ ಎಂಬುವದನ್ನು ನಾವು ನೋಡುತ್ತೇವೆ. ಯಾವುದೇ ಉದ್ಯೋಗ ಮಾಡುತ್ತಿದ್ದರೂ ಅವರ ಜೀವನದಲ್ಲಿ ನಗೆ ತುಂಬಾ ಮಹತ್ವ ಪಾತ್ರ ವಹಿಸುತ್ತದೆ. ನಗೆಯಿಂದ ನಮ್ಮ ಮನಸ್ಸು ಹಗುರರಾಗುತ್ತದೆ. ನಮ್ಮ ನಿತ್ಯ ಜೀವನದಲ್ಲಿ ಅನೇಕ ಹಾಸ್ಯ ಘಟನೆ,ಪ್ರಸಂಗಗಳನ್ನು ನೋಡುತ್ತೇವೆ. ರಾಜ್ಯ ನಗೆಕೂಟದವರು ಇಂತಹ ಸಮ್ಮೇಳನ ನಡೆಸುವ ಮೂಲಕ ಹೊಸ ಚೇತರಿಕೆ ಮೂಡಿಸುತ್ತಿರುವುದು ಶ್ಲಾಘನೀಯ ಎಂದರು.

ಹಾಸ್ಯ ಸಾಹಿತ್ಯವೂ ಕನ್ನಡ ಸಾಹಿತ್ಯದ ಅವಿಭಾಜ್ಯ ಅಂಗವಾಗಿದೆ. ಹಾಸ್ಯ ಸಾಹಿತ್ಯವು ಮನಸ್ಸಿಗೆ ಉಲ್ಲಾಸ ... ಪ್ರಸಂಗಗಳನ್ನು ಹೇಳುವ ಮೂಲಕ ಸಭಿಕರನ್ನು ನಗೆಗಡಲಲ್ಲಿ ತೇಲಿಸಿದರು.

ಸಾನಿಧ್ಯ ವಹಿಸಿದ್ದ ಸಿದ್ದಲಿಂಗ ಸ್ವಾಮೀಜಿ, ಸಮ್ಮೇಳನ ಉದ್ಘಾಟಿಸಿದ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿದರು.

ಅಧ್ಯಕ್ಷತೆಯನ್ನು ರಾಜ್ಯ ನಗೆಯೋಗಕೂಟದ ಅಧ್ಯಕ್ಷ ಪ್ರೊ.ಪಿ.ಸದಾಶಿವ ವಹಿಸಿದ್ದರು.

ವೇದಿಕೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಹಾರಿವಾಳ, ವಿಮಾ ಸಹಕಾರ ಮಹಾಮಂಡಳ ಅಧ್ಯಕ್ಷ ಶಿವನಗೌಡ ಬಿರಾದಾರ, ರಾಜ್ಯ ನಗೆಯೋಗ ಕೂಟಗಳ ಒಕ್ಕೂಟದ ಕಾರ್ಯದರ್ಶಿ ಬಿ.ಎಸ್.ರಾಜೇಶ್ವರ, ... ಸಂಘದ ತಾಲೂಕಾಧ್ಯಕ್ಷ ಶಿವಾನಂದ ಮಂಗಾನವರ, ಕೆ.ಜಿ.ಮಲ್ಲಿಕಾರ್ಜುನ, ಪರಮಶಿವಯ್ಯ, ಆರ್.ಆರ್. ಕಲ್ಲೂರ, ನಳಿನಾಕ್ಷಿ, ಸುಮಾ ಮೂಲಿಮನಿ, ವೀಣಾ ಪೂಜಾರಿ, ಮಹಾದೇವಿ ಬಿರಾದಾರ, ಪಿ.ಜಿ.ಕುಲಕರ್ಣಿ ಇತರರು ಇದ್ದರು.

ಆರಂಭದಲ್ಲಿ ಶರಣ ನಗೆಮಾ-ರಿತಂದೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಗೈಯಲಾಯಿತು. ಬಿ.ಎಂ.ಚಿಂಚೋಳಿ ಸ್ವಾಗತಿಸಿದರು. ಕೊಟ್ರೇಶಿ ಹೆಗಡ್ಯಾಳ ನಿರೂಪಿಸಿದರು. ಬಿ.ವ್ಹಿ.ಚಕ್ರಮನಿ ವಂದಿಸಿದರು.

ಇದೇ ಸಂದರ್ಭದಲ್ಲಿ ಶ್ರೀದೇವಿ ರೂಡಗಿ ಅವರ ಭರತನಾಟ್ಯ, ಕಿರಣ ರಾಠೋಡ ತಂಡದ ವಚನ ನೃತ್ಯ ಸಭಿಕರನ್ನು ಮನಸೂರೆಗೊಂಡಿತು.

# ಅಪರಿಚಿತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ರೇಲ್ವೆ ಪೋಲಿಸ್ ಠಾಣೆಯಲ್ಲಿ ಅಂದಾಜು 55 ವರ್ಷ ವಯಸ್ಸಿನ ಅಪರಿಚಿತ ಮೃತ ವ್ಯಕ್ತಿ ಪತ್ತೆಯಾಗಿರುವ ಕು-ರಿತು ಪ್ರಕರಣ ದಾಖಲಾಗಿದ್ದು, ಈ ಅಪರಿಚಿತ ವ್ಯಕ್ತಿಯ ವಾರಸುದಾರರ ಪತ್ತೆಗೆ ರೈಲ್ವೆ ಪೋಲಿಸ್ ಅಧಿಕಾ-ರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಮೃತ ವ್ಯಕ್ತಿಯ ಅಂದಾಜು 50 ರಿಂದ 55 ವರ್ಷ ವಯಸ್ಸಿನವಾಗಿದ್ದು, 5.5ಅಡಿ ಎತ್ತರ, ಸಾದಾಗಪ್ಪು ಮೈಬಣ್ಣ, ದಪ್ಪನೆಯ ಮೈಕಟ್ಟು, ಕೋಲು ಮುಖ, ಮೊಂಡ ಮೂಗು, ತಲೆಯಲ್ಲಿ 1.2 ಇಂಚ್ ಬಿಳಿ ಕಪ್ಪು ಕೂದಲು, ಬಿಳಿ ಕಪ್ಪು ಬಣ್ಣದ ದಾಡಿ, ಮೀಸೆವುಳ್ಳವನಾಗಿರುತ್ತಾನೆ. ಕಿವಿಯ ಅಲೆತಗಳು ತೂತು ಇದೆ. ಮೈಮೇಲೆ ಬೂದು ಬಣ್ಣದ ತೋಳಿನ ಜಾಕೆಟ್, ಕ್ರಿಮ್ ಕಲರ್ ರೆಡಿಮೇಡ್ ಪ್ಯಾಂಟ್, ಚಾಕಲೇಟ್ ಬಣ್ಣದ ಕೆಂಪು ಡಿಸೈನ್‌ವುಳ್ಳ ಬರಮೋಡಾ, ಕೊರಳಲ್ಲಿ ಕಪ್ಪು ದಾರ, ಸೊಂಟದಲ್ಲಿ ಕಪ್ಪುದಾರದ ಉಡದಾರ, ಸ್ಯಾಂಡಲ್ ಚಪ್ಪಲಿಗಳು ಧರಿಸಿದ್ದಾನೆ.ಈ ಚಹರೆಪಟ್ಟಿಯುಳ್ಳ ವ್ಯಕ್ತಿ ಬಗ್ಗೆ ಅಥವಾ ವಾರಸುದಾರರ ಕುರಿತು ಮಾಹಿತಿ ಇದ್ದಲ್ಲಿ ಸಾರ್ವಜನಿಕರು ಆರಕ್ಷಕ ಉಪ ನಿರೀಕ್ಷಕರು ರೇಲ್ವೆ ಪೋಲಿಸ್



ಠಾಣೆ ವಿಜಯಪುರ 08352-250883, ಅಥವಾ ರೇಲ್ವೆ ಪೋಲಿಸ್ ಕಂಟ್ರೋಲ್ ರೂಂ.080-22871291 ಗೆ ಮಾಹಿತಿ ಒದಗಿಸುವಂತೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಜಿಪಂ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ ಅಭಿಮತ

# ಸ್ವಚ್ಛತೆ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅನನ್ಯ

**ಉದಯರಶ್ಮಿ ನ್ಯೂಸ್**

ವಿಜಯಪುರ: ಗ್ರಾಮ ನಗರ ಸ್ವಚ್ಛತೆಯನ್ನು ಹೆಚ್ಚಿಸುವಲ್ಲಿ ಪೌರಕಾರ್ಮಿಕರ ಪಾತ್ರ ಅನನ್ಯವಾಗಿದ್ದು, ಸಮಾಜದಲ್ಲಿ ಪೌರ ಕಾರ್ಮಿಕರಿಗೆ ಗೌರವ ನೀಡುವುದು ಪ್ರತಿ ನಾಗರಿಕನ ಕರ್ತವ್ಯ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ನಗರಭಿವೃದ್ಧಿ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆ ವಿಜಯಪುರ ವತಿಯಿಂದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಂಡ ಪೌರಕಾರ್ಮಿಕರಿಗೆ ಇ.ಎಸ್.ಐ, ಪಿಎಫ್ ವಿಮೆ, ಸ್ವಚ್ಛತೆ ಮತ್ತು ಆರೋಗ್ಯ ಕುರಿತು ಅರಿವು ಮೂಡಿಸುವ ಒಂದು ದಿನದ ಕಾರ್ಯಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪೌರಕಾರ್ಮಿಕರ ಗೌರವಕ್ಕೆ ಕುಂದು ಬಾರದಂತೆ ನಡೆದುಕೊಳ್ಳಬೇಕು. ಅವರು ನಿರ್ವಹಿಸುವ ಕಾರ್ಯ ಅನನ್ಯವಾಗಿದೆ. ಸ್ವಚ್ಛ ಸುಂದರ ನಗರವನ್ನಾಗಿಸುವಲ್ಲಿ ಅವರು ನಿರ್ವಹಿಸುವ ಕಾರ್ಯ ಮಹತ್ತರವಾಗಿದೆ. ಅದರಂತೆ, ಪೌರಕಾರ್ಮಿಕರು ಸಹ ತಮ್ಮ ವೈಯಕ್ತಿಕ ಆರೋಗ್ಯದ ಕುರಿತು ನಿಗಾವಹಿಸಿ, ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು. ತಮ್ಮ ಮಕ್ಕಳಿಗೆ ವಿದ್ಯಾಭ್ಯಾಸ ಕೊಡಿಸಿ,ಅವರನ್ನು ವಿದ್ಯಾವಂತರನ್ನಾಗಿ ಮಾಡಿ, ಉನ್ನತ ಹುದ್ದೆಗೇರಲು ಪ್ರೇರೇಪಿಸಬೇಕು ಎಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತರಾದ ಬದ್ರುದಿನ್ ಸೌದಾಗರ್ ಮಾತನಾಡಿ, ನಗರ ಸ್ವಚ್ಛತೆಗಾಗಿ ಹಾಗೂ ಆರೋಗ್ಯ ಪೂರ್ಣ ಪರಿಸರ ನಿರ್ಮಾಣಕ್ಕಾಗಿ ಪೌರಕಾರ್ಮಿಕರು ಅನಾರೋಗ್ಯಕರ ವಾತಾವರಣದಲ್ಲಿಯೂ ಪ್ರತಿನಿತ್ಯ ಶ್ರಮ ವಹಿಸುತ್ತಾರೆ. ಅವರ ಕಾರ್ಯವನ್ನು ಪ್ರತಿಯೊಬ್ಬರು ಗೌರವಿಸಬೇಕು. ಸರ್ಕಾರ ಪೌರಕಾರ್ಮಿಕರಿಗೆ ಅನೇಕ ಸವಲತ್ತು ನೀಡುತ್ತಿದೆ. ಪೌರಕಾರ್ಮಿಕರಿಗಿರುವ ಸೌಲಭ್ಯಗಳ ಕುರಿತು ಅರಿವು ಮೂಡಿಸಲು ಈ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಹೇಳಿದರು.

ಸರಕಾರದಿಂದ ಪೌರಕಾರ್ಮಿಕ–ರಿಗಾಗಿ ಪ್ರತಿ ತಿಂಗಳು 2 ಸಾವಿರ ರೂ ಸಂಕಷ್ಟ ಭತ್ಯೆ, ವಿಶೇಷ ಭತ್ಯೆ ವರ್ಷದಲ್ಲಿ 21 ದಿನಗಳ ವಿಶೇಷ ಹೆಚ್ಚುವರಿ ವೇತನ, ಪೌರಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಸಹಾಯಧನ, ವಸತಿಯಲ್ಲಿ ಸಹಾಯಧನ, ವಿಮೆ ಸೌಲಭ್ಯ ಸೇರಿದಂತೆ ಅಗತ್ಯ ಎಲ್ಲಾ ಸೌಲಭ್ಯ ಸವಲತ್ತುಗಳನ್ನು ಸರಕಾರದ ವತಿಯಿಂದ ನೀಡಲಾಗುತ್ತಿದ್ದು, ಇದರ ಸದುಪಯೋಗ ಪಡೆಯಿರಿ ಎಂದು ಮನವರಿಕೆ ಮಾಡಿದರು.

ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ವಿಜಯಕುಮಾರ ಮೆಕ್ಕಳಕಿ ಅವರು ಮಾತನಾಡಿ, ನಮ್ಮ ದೇಶದ ಬೆನ್ನೆಲುಬು ಎಂದು ರೈತರನ್ನು ಕರೆಯುತ್ತೇವೆ. ಅದರಂತೆ ದೇಶದ ಸ್ವಚ್ಛತೆಯನ್ನು ಕಾಪಾಡುವವರು ಪೌರಕಾರ್ಮಿಕರು, ಹಾಗಾಗಿ ಅವರು ಕೂಡ ಈ ದೇಶದ ಬೆನ್ನೆಲುಬು ಎಂದು ಹೇಳಬಹುದು. ಸಮಾಜದಲ್ಲಿ ಪೌರಕಾರ್ಮಿಕರನ್ನು ಗೌರವದಿಂದ ಕಾಣಬೇಕು. ಸರ್ಕಾರದ ಯೋಜನೆಗಳನ್ನು ಪೌರ ಕಾರ್ಮಿಕರು ಪಡೆದುಕೊಳ್ಳಬೇಕು. ಸದುಪಯೋಗ ಪಡೆದುಕೊಂಡು ನೆಮ್ಮದಿ ಬದುಕು ಕಟ್ಟಿಕೊಳ್ಳಬೇಕು.

ಮಹಾನಗರ ಪಾಲಿಕೆ ವತಿಯಿಂದ ಪೌರಕಾರ್ಮಿಕರ ಆರೋಗ್ಯದ ದೃಷ್ಟಿಯಿಂದ ಕೆಲಸಕ್ಕೆ ಪೂರಕವಾಗುವ ವಿವಿಧ ಸುರಕ್ಷಾ ಸಾಮಗ್ರಿ ಸಲಕರಣೆ ಒದಗಿಸುತ್ತಿದ್ದು, ಅವುಗಳನ್ನು ಬಳಸಿಕೊಂಡು ಕೆಲಸ ನಿರ್ವಹಿಸಿ, ನಿಮ್ಮ ಆರೋಗ್ಯ ಮತ್ತು ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ. ಎಸ್. ಎಮ್. ಗುಣಾರಿ ಅವರು ಪೌರಕಾರ್ಮಿಕರ ಆರೋಗ್ಯದ ಬಗ್ಗೆ ಕಾರ್ಯಗಾರ ನೀಡಿ, ಪೌರ ಕಾರ್ಮಿಕರು ಜಿಲ್ಲೆಯ ನಗರ ಹಾಗೂ ಸ್ಥಳೀಯ, ಗ್ರಾಮೀಣ ಭಾಗದ ಸ್ವಚ್ಛ ಹಾಗೂ ಸುಂದರ ನಗರ ನಿರ್ಮಾಣದಲ್ಲಿ ಇವರು ನಿರ್ವಹಿಸುತ್ತಿದ್ದಾರೆ. ಅವರು ತಮ್ಮ ಆರೋಗ್ಯದ ಕಡೆ ವಿಶೇಷ ಗಮನ ಹರಿಸಬೇಕು. ನಿಮಗೆ ಹಾಗೂ ನಿಮ್ಮ ಕುಟುಂಬದ ಸದಸ್ಯರಿಗೆ ಆರೋಗ್ಯದಲ್ಲಿ ಯಾವುದೇ ರೀತಿಯ ಸಮಸ್ಯೆಗಳಿದ್ದಲ್ಲಿ, ಉಚಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬಹುದು. ಪ್ರತಿಯೊಬ್ಬ ಪೌರಕಾರ್ಮಿಕರು ಆಯುಷ್ಮಾನ್ ಅರೋಗ್ಯ ಕಾರ್ಡ್ ಪಡೆಯಿರಿ, ಬಿಪಿಎಲ್ ಹಾಗೂ ಎಪಿಎಲ್ ಕಾರ್ಡ್ ಹೊಂದಿದ ಪ್ರತಿಯೊಬ್ಬರು ಉಚಿತವಾಗಿ ಅಯುಷ್ಮಾನ್ ಕಾರ್ಡ್ ಪಡೆದು, ಆರೋಗ್ಯ ತಪಾಸಣೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಪೌರಕಾರ್ಮಿಕರಿಗೆ ನೀಡಿರುವ ಸಾಮಗ್ರಿ ಹಾಗೂ ಸಲಕರಣೆಗಳನ್ನು ಬಳಸಿಕೊಂಡು ಕಾರ್ಯ ನಿರ್ವಹಿಸಬೇಕು. ನಿಮ್ಮ ಸ್ವಚ್ಛತೆ ಹಾಗೂ ಆರೋಗ್ಯವನ್ನು ಕಾಪಾಡಿಕೊಳ್ಳುವ ಮೂಲಕ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು ಎಂದರು.

ಪೌರ ಕಾರ್ಮಿಕರ ತರಬೇತಿದಾರ ಜಗದೀಶ ಅವರು ಪೌರ ಕಾರ್ಮಿಕರ ಸ್ವಚ್ಛತೆ ಕುರಿತು ಕಾರ್ಯಗಾರ ನೀಡಿ, ಪೌರಕಾರ್ಮಿಕರು ಆರೋಗ್ಯದೊಂದಿಗೆ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು ಅಷ್ಟೇ ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಪುಂಡಲೀಕ ಮಾನವರ ಸ್ವಾಗತಿಸಿದರು. ಇಎಸ್ ಐ ಅಧಿಕಾರಿಗಳು, ಇಪಿ–ಎಫ್ ಅಧಿಕಾರಿಗಳು, ಭೀಮರಾಯ ಜಿಗಜಿಣಗಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಪೌರ ಕಾರ್ಮಿಕರು ಉಪಸ್ಥಿತರಿದ್ದರು.




## ವಿಜಯಪುರ ಜಿಲ್ಲೆಯ 308 ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಣೆ

# ಪೌರಕಾರ್ಮಿಕರು ಸ್ವಚ್ಛತಾ ಸೈನಿಕರು :ಡಿಸಿ ಟಿ.ಭೂಬಾಲನ್



**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಲ್ಲಿ ಕಾರ್ಯನಿರ್ವಹಿಸುತ್ತಿರುವ 308 ಪೌರಕಾರ್ಮಿಕರಿಗೆ ಖಾಯಂ ನೇಮಕಾತಿ ಆದೇಶ ಪತ್ರವನ್ನು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ವಿತರಣೆ ಮಾಡಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಶನಿವಾರ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಜಿಲ್ಲೆಯ ಮಹಾನಗರ ಪಾಲಿಕೆ, ಪುರಸಭೆ, ಪಟ್ಟಣ ಪಂಚಾಯತಿ ಸೇರಿದಂತೆ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಜಿಲ್ಲಾಧಿಕಾರಿಗಳಿಂದ ನೇಮಕಾತಿ ಆದೇಶ ಪಡೆದುಕೊಂಡರು.

ಆದೇಶ ಪ್ರತಿ ಪಡೆದ ಪೌರಕಾರ್ಮಿಕರು ಅಪಾರ ಸಂತಸ ವ್ಯಕ್ತಪಡಿಸಿ, ನಮ್ಮ ಬಾಳಿಗೆ ಬೆಳಕು ಕಲ್ಪಿಸಿದ ಜಿಲ್ಲಾಡಳಿತ, ಜಿಲ್ಲಾಧಿಕಾ–ರಿಗಳಿಗೆ ಕೃತಜ್ಞತೆಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು, ನಗರ ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಛತೆಯನ್ನು ಕಾಪಾಡುವ ಪೌರಕಾರ್ಮಿಕರು ಸ್ವಚ್ಛತಾ ಸೈನಿಕರಾಗಿ ಕಾರ್ಯನಿರ್ವಹಿಸುತ್ತಾರೆ. ಇವರ ಬದುಕಿಗೆ ಆಧಾರ ಕಲ್ಪಿಸಲು ಸರ್ಕಾರ ನೇಮಕಾತಿ ಆದೇಶ ನೀಡಿದ್ದು, ಪ್ರತಿ ಪೌರಕಾರ್ಮಿಕರಿಗೆ ಎರಡು ಜೊತೆ ಸಮವಸ್ತ್ರ, ಸುರಕ್ಷಾ ಸಾಧನಗಳನ್ನು ಒದಗಿಸಲಾಗುವುದು. ತಮ್ಮ ಆರೋಗ್ಯ ಕಾಪಾಡಿಕೊಂಡು ಸುರಕ್ಷಾ ಸಾಧನಗಳನ್ನು ಬಳಸಿ ಕಾರ್ಯನಿರ್ವಹಿಸಬೇಕು. ಸಮಾಜದ ಸ್ವಾಸ್ಥ □□ ಕಾಪಾಡುವ ನಿಮ್ಮ ಕಾರ್ಯ ಶ್ಲಾಘನೀಯವಾಗಿದ್ದು, ನಿಮ್ಮ ವೈಯಕ್ತಿಕ ಆರೋಗ್ಯವನ್ನು ಸಧೃಡವಾಗಿಟ್ಟುಕೊಳ್ಳಬೇಕು. ಪಾಲಿಕೆ ವ್ಯಾಪ್ತಿಯಲ್ಲಿ ವೈದ್ಯರು ಕ್ಲಿನಿಕ್ ಸ್ಥಾಪನೆ ಮಾಡಲಾಗುವುದು, ಈ ಕೇಂದ್ರದಲ್ಲಿ ಪ್ರಾಥಮಿಕ ಹಂತದ ಚಿಕಿತ್ಸೆ ಮತ್ತು ಉಚಿತ ಔಷಧೋಪಚಾರ ದೊರೆಯಲಿದ್ದು, ಬಿಡುವಿನ ಸಮಯದಲ್ಲಿ ತಮ್ಮ ಆರೋಗ್ಯ ಕುರಿತು ಚಿಕಿತ್ಸೆ ಪಡೆದುಕೊಳ್ಳಬೇಕು. ವೈದ್ಯಕೀಯ ತಪಾಸಣೆ ಮಾಡಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು. ಆಸ್ಪತ್ರೆ ಔಷಧೋಪಚಾರ ಉಚಿತವಾಗಿದ್ದು, ಈ ವರ್ಷ ಪೌರಕಾರ್ಮಿಕರಿಗೆ ವೈದ್ಯಕೀಯ ವಿಮೆ ಸಹ ನೀಡಲಾಗುತ್ತಿದ್ದು, ಮುಂದಿನ ವರ್ಷದಿಂದ ಪೌರಕಾರ್ಮಿಕರ ಅವಲಂಬಿತ ಕುಟುಂಬದವರಿಗೂ ವಿಮೆ ಸೌಲಭ್ಯ ವಿಸ್ತರಿಸಲಾಗುತ್ತದೆ ಎಂದು ಹೇಳಿದರು.

15ನೇ ಹಣಕಾಸು ಯೋಜನೆಯಡಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2 ಸುವಿಧಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಈ ಸುವಿಧಾ ಕೇಂದ್ರದಲ್ಲಿ ಸ್ನಾನಗೃಹ, ವಿಶ್ರಾಂತಿ ಕೊಠಡಿ, ಶೌಚಾಲಯ ಒಳಗೊಂಡಿರುತ್ತದೆ. ಮುಂದಿನ ವರ್ಷ ಪ್ರತಿ ಐದು ವಾರ್ಡಿಗೊಂದು ಸುವಿಧಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಪ್ರತಿ ಮೂರು ತಿಂಗಳಗೊಮ್ಮೆ ಪೌರಕಾರ್ಮಿಕರ ಕುಂದು ಕೊರತೆ ಸಭೆ ನಡೆಸಿ ಪರಿಹಾರ ಒದಗಿಸಲು ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾ–ರಿಗಳಿಗೆ ಸೂಚಿಸಲಾಗಿದೆ. ಗೃಹ ಭಾಗ್ಯ ಯೋಜನೆಯಡಿ ಮನೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಮುಂಬರುವ ದಿನಗಳಲ್ಲಿ ಅರ್ಹ ಫಲಾನುಭವಿಗಳಿಗೆ ಮನೆ ಹಂಚಿಕೆ ಮಾಡಲಾಗುವುದು ಎಂದು ಹೇಳಿದರು.

ಕಳೆದ 15 ವರ್ಷಗಳಿಂದ ಪೌರಕಾರ್ಮಿಕಳಾಗಿ ಕಾರ್ಯನಿರ್ವಹಿಸುತ್ತಿದ್ದು, 500 ರೂ. ಪಗಾರದಿಂದ ಕೆಲಸ ಆರಂಭ ಮಾಡಿದ್ದೀನಿ. ಪೌರ ಕಾರ್ಮಿಕ ಹುದ್ದೆ ಖಾಯಂ ನೇಮಕಾತಿ ಆದೇಶ ಜಿಲ್ಲಾಧಿಕಾರಿಗಳಿಂದ ಪಡದಿದ್ದು, ಭಾಳ ಖುಷಿಯಾಗೇತಿ, ನಮಗ ಅನುಕೂಲ ಮಾಡಿಕೊಟ್ಟಂತಹ ಜಿಲ್ಲಾಧಿಕಾ–ರಿಗಳಿಗೆ ಮನಸ್ಸಿನಿಂದ ಕೃತಜ್ಞತೆ ಸಲ್ಲಿಸತೀನ್ರಿ ಎಂದು ಆಲಮೇಲದ ಪೌರಕಾರ್ಮಿಕರೊಬ್ಬರು ತಮ್ಮ ಸಂತಸವನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಬದ್ರೂದ್ದಿನ ಸೌದಾಗರ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ವಿಜಯಕುಮಾರ ಮೆಕ್ಕಳಕಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪುಂಡಲೀಕ ಮಾನವರ, ಜಗದೀಶ, ಬಾಬು ಸಜ್ಜನ, ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ಅಧಿಕಾರಿಗಳು, ಸಿಬ್ಬಂದಿಗಳು, ಪೌರಕಾರ್ಮಿಕರು ಉಪಸ್ಥಿತರಿದ್ದರು.



# ನೆರಳು



ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ಅವಿನಾಶ ಸೆರೆಮನಿ.
("ನಮ್ಮ ಕಥಾ ಅರಮನೆ" ಬರಹಗಾರರು)




ಬಸವಳಿದ ಈ ಜೀವಕೆ ನೆರಳಾಗಿ ಬಂದು
ಮಾತಿನಲಿ ಬಂಧಿಸಿದೆ ಒಲವಲಿ ಮಿಂದು

ಮಂದಹಾಸ ಸೂಸಿ ಭರವಸೆ ಬಳ್ಳಿ ಹಬ್ಬಿಸಿ
ಮನದಂಗಳಕೆ ಬಂದು ನಿಂತೆ ನಗು ಸೂಸಿ

ಕನಸ ಈಡೇರಿಸುತ ಜೊತೆಯಾಗಿ ನಡೆವ
ಹೂವಂತೆ ಬೆಸೆದು ಬದುಕ ಅರಳಿಸಿ ನಲಿವ

ವಿನೂತನ ಛಾಪು ಮೂಡಿಸಿದೆ ಹೃದಯದಿ
ಹೊಸ ಅಧ್ಯಾಯ ಆರಂಭ ಬಾಳ ಪುಟದಿ.

# ಕೂಸು ಇದ್ದ ಮನೆಗೆ ಬೀಸಣಿಕೆ ಯಾತಕ??



## ಭಾವರಶ್ಮಿ

– ಜಯಲಕ್ಷ್ಮೀ ಕೃಷ್ಣ., ಬೆಂಗಳೂರು
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ನಮ್ಮ ಜಾನಪದ ಸಾಹಿತ್ಯವು ನಮ್ಮ ಹುಟ್ಟಿನಿಂದಲೇ ನಮ್ಮ ಜೊತೆಜೊತೆಯಾಗಿ ಬೆರೆತು ಹೋಗಿದೆ. ಹಾಡುಗಳು ಅಥವಾ ಪದಗಳು ಬಾಯಿಂದ ಬಾಯಿಗೆ, ಹಳ್ಳಿಯಿಂದ ಹಳ್ಳಿಗೆ, ನಗರದಿಂದ ನಗರಕ್ಕೆ ಹೀಗೆ ಬರ ಬರುತ್ತಾ ಜಾನಪದ ಗೀತೆಗಳಾದವು. ಜಾನಪದ ಸಾಹಿತ್ಯ, ಸಂಗೀತ ಅಥವಾ ಪದಗಳು ತನ್ನದೇ ಆದ ಮಹತ್ವವನ್ನು ಪಡೆದುಕೊಂಡಿವೆ. ಅನೇಕ ಸೊಗಸಾದ, ಅರ್ಥವತ್ತಾದ, ಜೀವನದ ಮೌಲ್ಯಗಳನ್ನು ತಿಳಿಸುವ ಅನೇಕ ಜಾನಪದ ಗೀತೆಗಳು ಬಹಳ ಜನಪ್ರಿಯತೆಯನ್ನು ಪಡೆದುಕೊಂಡಿವೆ.

ಅಂತಹ ಜಾನಪದ ಗೀತೆಗಳಲ್ಲಿ ಬಹಳ ಸೊಗಸಾದ ಗೀತೆಯ ಸಾಲುಗಳು ಹೀಗಿವೆ. ಜೋಗುಳದ ಹಾಡಿನ ರೂಪದಲ್ಲಿ,

ಕೂಸು ಇದ್ದ ಮನಿಗೆ ಬೀಸಣಿಕೆ ಯಾತಕ

ಕೂಸು ಕಂದಯ್ಯ ಒಳಹೊರಗ//

ಕೂಸು ಕಂದಯ್ಯ

ಒಳಹೊರಗ ಆಡಿದರಾ ಬೀಸಣಿಕೆ

ಗಾಳಿ ಸುಳಿದಾವ॥

ಅಬ್ಬಾ! ಎಂತಹ ಅದ್ಬುತ ಸಾಲುಗಳು. ಸಂಪೂರ್ಣವಾದ ಮಗುವನ್ನು ಕುರಿತಾದ ಈ ಜಾನಪದ ಗೀತೆಯನ್ನು ಕೇಳಿದರೆ ಮತ್ತೆಮತ್ತೆ ಅಮ್ಮನ ಬಾಯಿಂದ ಹಾಡಾಗಿ ಹರಿದು ಬರಲಿ ಎಂಬ ಬಯಕೆ ಮೂಡದೇ ಇರಲಾರದು. ಅಂತಹ ಸೊಗಸಾದ ಸಾಲುಗಳು.

ಮಗುವನ್ನು ತೊಟ್ಟಿಲಲ್ಲಿ ಮಲಗಿಸಿ, ಮಗುವನ್ನು ಮಲಗಿಸಲು ತಾಯಿ ಹಾಡುವ ಲಾಲಿ ಹಾಡು ಇದು. ಈ ಹಾಡನ್ನು ಕೇಳಿದ ಯಾವುದೇ ಮಗುವು ನಿದ್ರಾ ದೇವಿಯ ತೆಕ್ಕೆಗೆ ಜಾರದೇ ಇರುವುದಿಲ್ಲ. ಅಂತಹ ಸೊಗಸಾದ ಜಾನಪದ ಗೀತೆ ಇದಾಗಿದೆ. ಬಹಳ ಸುಂದರ ಸಾಲುಗಳು. "ಕೂಸು ಇದ್ದ ಮನಿಗೆ ಬೀಸಣಿಕೆ ಯಾತಕ"

ಎಂದು ತಾಯಿ ತನ್ನ ಮಗುವನ್ನು ಕುರಿತಾಗಿ ಬಹಳ ಪ್ರೀತಿಯಿಂದ ಹಾಡುತ್ತಾಳೆ.

ತಾಯ್ತನ ಎನ್ನುವುದೇ ಒಂದು ಅಧ್ಬುತ, ಪುನರ್ಜನ್ಮ, ಹೆಣ್ಣಿನ ಜೀವನಕ್ಕೆ ಸಂಪೂರ್ಣತೆಯನ್ನು ನೀಡುವ ಒಂದು ವರದಾನವಾಗಿದೆ. ತಾಯ್ತನದ ಸುಖವೇ ಒಂದು ರೋಮಾಂಚನ. ಮಗುವಿನೊಂದಿಗೆ ಮತ್ತೆ ಮಗುವಾಗುವ ಒಂದು ಸುಂದರ ಅವಕಾಶ, ದೇವನಿತ್ತ ವರ ತಾಯ್ತನ. ಅಂತಹ ಅಧ್ಬುತ ಗಳಿಗೆಯನ್ನು ಆನಂದದಿ ಅನುಭವಿಸುತ್ತಾ ಹಾಡುವಳು. ಕೂಸು ಇದ್ದ ಮನಿಗೆ ಬೀಸಣಿಕೆ ಯಾತಕ, ಎಂದರೆ ಮಗುವಿದ್ದ ಮನೆಯಲ್ಲಿ ಬೀಸಣಿಕೆಯೇ ಬೇಡ. ಮಗುವು ಮನೆಯಿಂದ ಹೊರಗೆ, ಹೊರಗಡೆಯಿಂದ ಮನೆಯೊಳಗೆ ತನ್ನ ಮುದ್ದಾದ ಪುಟ್ಟ ಪುಟ್ಟ ಹೆಜ್ಜೆಗಳನ್ನು ಇಡುತ್ತಾ ಅತ್ತಿಂದಿತ್ತ, ಇತ್ತಿಂದತ್ತ ಓಡಾಡುತ್ತಿದ್ದರೆ, ಮನೆಯಲ್ಲಿ ಬೀಸಣಿಕೆಯಂತ ತಂಗಾಳಿ ಬೀಸುವಂತೆ ಭಾಸವಾಗುತ್ತದೆ. ಅದಕ್ಕೇ ಮಗುವಿರುವ ಮನೆಗೆ ಬೀಸಣಿಕೆಯ ಅಗತ್ಯವೇ ಇರುವುದಿಲ್ಲ ಎಂಬುದಾಗಿ ತನ್ನ ಮನದ ಭಾವವನ್ನು ತಾಯಿ ಪದಕಟ್ಟಿ ರಾಗವಾಗಿ ಬಹಳ ಸೊಗಸಾಗಿ ಹಾಡುತ್ತಾಳೆ.

ಮಕ್ಕಳಿರುವ ಮನೆ ಸ್ವರ್ಗಕ್ಕೆ ಸಮಾನ. ಅವರ

ಆ ತೊದಲು ನುಡಿಗಳು, ಬಾಲ ಕೃಷ್ಣನ ಅಂದದಿ ಇಡುವ ಪುಟ್ಟಪುಟ್ಟ ಹೆಜ್ಜೆಗಳು, ಗೆಜ್ಜೆಯ ಇಂಪಾದ ಸದ್ದು, ತುಂಟಾಟಗಳು, ಹೀಗೆ ಎಲ್ಲವೂ ಒಂದು ರೀತಿಯಲ್ಲಿ ಸುಂದರ ಅನುಭವಗಳು. ಮಕ್ಕಳೊಂದಿಗೆ ಮತ್ತೆ ನಾವೂ ಸಹ ಮಕ್ಕಳಾಗಿ ಬಿಡುತ್ತೇವೆ. ಮನದಲ್ಲಿ ಎಷ್ಟೇ ನೋವು, ದುಗುಡ, ದುಮ್ಮಾನ, ಜೀವನದಲ್ಲಿ ಕಷ್ಟನಷ್ಟಗಳಿದ್ದರೂ ಸಹ ಮಗುವಿನ ಆ ಮುದ್ದು ಮುಖವನ್ನು ಒಮ್ಮೆ ನೋಡಿದರೆ ಸಾಕು, ಅದನ್ನು ಎತ್ತಿಕೊಂಡು ಮುದ್ದಾಡಿದರೆ ಸಾಕು, ಅದರ ತೊದಲು ನುಡಿಗಳನ್ನು ಒಮ್ಮೆ ಕೇಳಿದರೆ ಸಾಕು, ಜಗತ್ತನ್ನೇ ಮರೆತು ಅವರೊಡನೆ ನಾವು ಬೆರೆತು ಹೋಗುತ್ತೇವೆ.

ಅದಕ್ಕೆ ನಮ್ಮ ಹಿರಿಯರು ಹೇಳುತ್ತಿದ್ದರು 'ಮಕ್ಕಳಿರವ್ವ ಮನೆ ತುಂಬಾ' ಎಂದು. ಆದರೆ ಈಗ ಒಂದು ಅಥವಾ ಎರಡಕ್ಕೇ ಕೊನೆಗೊಳ್ಳುತ್ತದೆ. ಕಾಲಕ್ಕೆ ತಕ್ಕಂತೆ ಜೀವನದಲ್ಲಿ ಹೊಂದಾಣಿಕೆ ಸಹ ಬೇಕಾಗುತ್ತದೆ. ಆದರೆ ಒಂದೋ ಎರಡೋ ಮಗುವಿರುವ ಮನೆಯೇ ಭೂ ಕೈಲಾಸ ಬಾಲ ಶಿವನ ಅಂದದಿ, ವೈಕುಂಠ ಬಾಲ ಕೃಷ್ಣ, ಲಕ್ಷ್ಮಿಯ ರೂಪದಿ. ಮಕ್ಕಳಿರುವ ಮನೆಯೇ ದೇವಲೋಕ. ಮನೆಗೆ ಒಂದು ಮಗುವಿದ್ದರೆ ಸಾಕು ಜಗತ್ತಿನ ಪರಿವೆಯನು ಮರೆಸಿ ಮಗುವು ನಮ್ಮನ್ನು ಆವರಿಸಿಕೊಂಡು ತನ್ನತ್ತ ಸೆಳೆದುಕೊಳ್ಳುವ ಅಯಸ್ಕಾಂತವಾಗಿ ಬಿಡುತ್ತದೆ.

ಆದುದರಿಂದ ಮಗುವಿರುವ ಮನೆಯೇ ನಂದಗೋಕುಲ. ಆನಂದದ ಸಾಗರ. ಶಾಂತಿ ಸಮಾಧಾನ ನೆಮ್ಮದಿ, ಸಮೃದ್ಧಿ, ಸುಖಗಳ ಆಗರ.

